05 ಸೆಪ್ಟೆಂಬರ್ 2025 ಶುಕ್ರವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 176 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629


ಜನಮನದ ದನಿ


# ಪ್ರಜೋದಯ

ದಿನಪತ್ರಿಕೆ

ಸಂಪಾದಕ : ಜೆ.ಆರ್. ಕೆಂಚೇಗೌಡ

ಕಾನೂನುಬಾಹಿರ ಬೆಟ್ಟಿಂಗ್ ಆ್ಯಪ್ ಸಂಬಂಧಿತ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ವಿಚಾರಣೆಗೆ ಹಾಜರಾಗುವಂತೆ ಭಾರತದ ಮಾಜಿ ಕ್ರಿಕೆಟಿಗ ಶಿಖರ್ ಧವನ್ ಅವರಿಗೆ ಜಾರಿ ನಿರ್ದೇಶನಾಲಯ ಗುರುವಾರ ಸಮನ್ಸ್ ಜಾರಿ ಮಾಡಿದೆ.






ಗುರು ಸಮೂಹದ ಚಿರ ಧ್ರುವತಾರೆ ಡಾ.ಸರ್ವಪಲ್ಲಿ ರಾಧಾಕೃಷ್ಣನ್ » 2



ಪಾಕಿಸ್ತಾನ ದುಸ್ಸಾಹಸಕ್ಕೆ ಮುಂದಾದ್ರೆ ಘೋರ ಪರಿಣಾಮ » 3



ಸಿಮೆಂಟ್ ಮಂಜು ವಿರುದ್ಧ ತಹಶೀಲ್ದಾರ್ ಗರಂ » 4

# ಇವಿಎಂ ಬದಲು ಮತಪತ್ರಕ್ಕೆ ಸಂಪುಟ ಅಸ್ತು

## ಚುನಾವಣಾ ಆಯೋಗಕ್ಕೆ ಶಿಫಾರಸ್ಸು ಮಾಡಲು ತೀರ್ಮಾನ | ಅಗತ್ಯ ಕಾನೂನು ತಿದ್ದುಪಡಿಗೆ ಒಪ್ಪಿಗೆ

• ಪ್ರಜೋದಯ ವರದಿ

**ಬೆಂಗಳೂರು:** ರಾಜ್ಯದಲ್ಲಿ ಮುಂಬರುವ ಎಲ್ಲಾ ಪಂಚಾಯಿತಿ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ಇವಿಎಂ ಬದಲಿಗೆ ಮತಪತ್ರ (ಬ್ಯಾಲೆಟ್ ಪೇಪರ್)ಗಳ ಮೂಲಕ ನಡೆಸುವಂತೆ ರಾಜ್ಯ ಚುನಾವಣಾ ಆಯೋಗಕ್ಕೆ ಶಿಫಾರಸ್ಸು ಮಾಡಲು ರಾಜ್ಯ ಸಚಿವ ಸಂಪುಟ ನಿರ್ಧರಿಸಿದೆ.

ಗುರುವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್ ಅವರು, ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ಮತಪತ್ರಗಳ ಮೂಲಕ ನಡೆಸಲು ಶಿಫಾರಸ್ಸು ಮಾಡಲು ಸಚಿವ ಸಂಪುಟ ತೀರ್ಮಾನಿಸಿದೆ. ಇವಿಎಂ ಬಗ್ಗೆ ಜನರಲ್ಲಿ ವಿಶ್ವಾಸ ಮತ್ತು ವಿಶ್ವಾಸಾರ್ಹತೆ ಕಡಿಮೆಯಾಗಿದೆ ಎಂದು ತಿಳಿಸಿದರು.

ರಾಜ್ಯ ಚುನಾವಣಾ ಆಯೋಗವು ಮತದಾರರ ಪಟ್ಟಿಯನ್ನು ಸಿದ್ಧಪಡಿಸಲು ಮತ್ತು



ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಅಗತ್ಯವಾದ ಪರಿಷ್ಕರಣೆ ಮಾಡಲು, ರಾಜ್ಯ ಸಚಿವ ಸಂಪುಟ ಅಗತ್ಯ ಕಾನೂನು ಮಾಡಲು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡಲು ನಿರ್ಧರಿಸಿದೆ ಎಂದರು.

**ಆಶಾ ಕಿರಣ ಯೋಜನೆ ಅನುಷ್ಠಾನ**


ರಾಜ್ಯ ಸರ್ಕಾರ ಎಲ್ಲಾ ಜಿಲ್ಲೆಗಳಲ್ಲಿಯೂ ಆಶಾ ಕಿರಣ ಯೋಜನೆ ಅನುಷ್ಠಾನ ಮಾಡಲು 52.85 ಕೋಟಿ ರೂ. ಅನುದಾನ ನೀಡಲಾಗುವುದು. ಕಣ್ಣಿನ ಉಚಿತ ತಪಾಸಣೆಯೇ ಆಶಾಕಿರಣ ಯೋಜನೆಯಾಗಿದೆ. ಅಂಧತ್ವ ನಿವಾರಣಾ ಕಾರ್ಯಕ್ರಮವನ್ನೂ ಒಳಗೊಂಡ ಯೋಜನೆಗೆ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗುವುದೆಂದು ತಿಳಿಸಿದ್ದಾರೆ.

**ಹೋರಾಟಗಾರರ ವಿರುದ್ಧದ 60 ಪ್ರಕರಣ ವಾಪಾಸ್**

ರೈತರು, ಕನ್ನಡಪರ ಹೋರಾಟಗಾರರ ವಿರುದ್ಧದ 60 ಪ್ರಕರಣಗಳು ವಾಪಾಸ್ ಪಡೆಯಲು ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ನೀಡಲಾಗಿದೆ ಎಂದು ಹೆಚ್.ಕೆ.ಪಾಟೀಲ್ ಅವರು ತಿಳಿಸಿದ್ದಾರೆ.

» ನಾಲ್ಕನೇ ಪುಟದಲ್ಲಿ

### ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ 63.34 ಕೋ.ರೂ.



ಜಿಲ್ಲೆಯಲ್ಲಿ ನಿರ್ಮಾಣವಾಗುತ್ತಿರುವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡ ನಿರ್ಮಾಣ ಕಾಮಗಾರಿಯ 63.34 ಕೋಟಿ ರೂ. ಪರಿಷ್ಕೃತ ಅಂದಾಜು ಪಟ್ಟಿಗೆ ಸಚಿವ ಸಂಪುಟ ಸಭೆಯಲ್ಲಿ ಆಡಳಿತಾತ್ಮಕ ಅನುಮೋದನೆ ದೊರೆತಿದೆ.

ಈ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಪ್ರತಿಕ್ರಿಯಿಸಿ, ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಹಿಮ್ಸ್) ಆವರಣದಲ್ಲಿ ಉದ್ದೇಶಿತ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಕಟ್ಟಡ ಸ್ಥಾಪನೆಯನ್ನು ಈ ಹಿಂದೆಯೇ ಆರಂಭಿಸಲಾಗಿತ್ತು. ಆದರೆ ಅಗತ್ಯ ಅನುದಾನ ಕೊರತೆಯಿಂದ ಕಾಮಗಾರಿ ಪೂರ್ಣಗೊಂಡಿಲ್ಲ. ಹೀಗಾಗಿ ರೋಗಿಗಳನ್ನು ಮಂಗಳೂರು, ಬೆಂಗಳೂರು ಸೇರಿ ಬೇರೆ ಆಸ್ಪತ್ರೆಗಳಿಗೆ ವರ್ಗಾಯಿಸಲಾಗುತ್ತಿದೆ. ಅದರಿಂದ ಬಡ ಜನರಿಗೆ ಸಾಕಷ್ಟು ಸಮಸ್ಯೆ ಉಂಟಾಗುತ್ತಿರುವ ವಿಚಾರವನ್ನು ಸಂಸದರು, ಸ್ಥಳೀಯ ಜನಪ್ರತಿನಿಧಿಗಳು ಮತ್ತು ಸಾರ್ವಜನಿಕರು ನನ್ನ ಗಮನಕ್ಕೆ ತಂದಿದ್ದರು. ಈ ಸಮಸ್ಯೆಗೆ ಪರಿಹಾರ ನೀಡುವ ಸಂಬಂಧ ನಾನು ವೈದ್ಯಕೀಯ ಶಿಕ್ಷಣ ಸಚಿವರು ಹಾಗು ಮುಖ್ಯಮಂತ್ರಿ ಗಮನಕ್ಕೆ ತಂದು, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಬಾಕಿ ಇರುವ ಕೆಲಸಗಳನ್ನು ಪೂರ್ಣಗೊಳಿಸಿ, ಸಾರ್ವಜನಿಕ ಸೇವೆಗೆ ಒದಗಿಸುವುದು ಈಗಿನ ತುರ್ತು ಅವಶ್ಯಕವಾಗಿರುತ್ತದೆ ಹೀಗಾಗಿ ಇದನ್ನು ಪೂರೈಸಲು ಮನವಿ ಮಾಡಿದ್ದೇನೆ. ಮನವಿಗೆ ಸ್ಪಂದಿಸಿ, ಈ ವಿಚಾರಕ್ಕೆ ಪರಿಹಾರ ನೀಡಲು ಸೂಚಿಸಿದ್ದಾರೆ ಎಂದು ಹೇಳಿದ್ದಾರೆ.

# ಜಿಎಸ್‌ಟಿಯಲ್ಲಿ ಕ್ರಾಂತಿಕಾರಿ ಬದಲಾವಣೆ: ಹೆಚ್‌ಡಿಕೆ

• ಪ್ರಜೋದಯ ವರದಿ



**ನವದೆಹಲಿ:** ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ವ್ಯವಸ್ಥೆಯಲ್ಲಿ ಕ್ರಾಂತಿಕಾರಿ ಬದಲಾವಣೆಗಳನ್ನು ಜಾರಿಗೆ ತಂದು, ರಾಷ್ಟ್ರಕ್ಕೆ ಐತಿಹಾಸಿಕ ದೀಪಾವಳಿ ಉಡುಗೊರೆ ನೀಡಿದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಬಣ್ಣಿಸಿದ್ದಾರೆ.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯು ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಯನ್ನು ಅನುಮೋದಿಸಿದೆ. ಇದು ಜನಜೀವನ ಸುಲಭಗೊಳಿಸುವುದು ಮತ್ತು ಆತ್ಮನಿರ್ಭರ ಭಾರತವನ್ನು ಬಲಪಡಿಸುವ ಒಂದು ಪರಿವರ್ತನಾತ್ಮಕ ಹೆಜ್ಜೆಯಾಗಿದೆ ಎಂದು ಹೇಳಿದ್ದಾರೆ.

ಹೊಸ ಸುಧಾರಣೆಯೊಂದಿಗೆ ಜಿಎಸ್‌ಟಿ ಈಗ ಕೇವಲ ಎರಡು ಸ್ಲ್ಯಾಬ್‌ಗಳನ್ನು ಹೊಂದಿದ್ದು, ಶೇ.5 ಮತ್ತು ಶೇ.18 ಆಗಿರುತ್ತದೆ. ದೈನಂದಿನ ಜೀವನದ ಅಗತ್ಯ ವಸ್ತುಗಳು, ಆರೋಗ್ಯ ರಕ್ಷಣೆ, ಶಿಕ್ಷಣ, ಕೃಷಿ ಮತ್ತು ವಾಹನಗಳು ಸಹ ಸುಲಭವಾಗಿ ಕೈಗೆಟುಕುವಂತಾಗುತ್ತವೆ. ಜೊತೆಗೆ, ಉದ್ಯಮಗಳು ಹಾಗು ಸಣ್ಣ ಮತ್ತು ಮಧ್ಯಮ ಗಾತ್ರದ ಕೈಗಾರಿಕೆ (ಎಂಎಸ್‌ಎಂಇ) ಗಳು ಭಾರೀ ಉತ್ತೇಜನವನ್ನು ಪಡೆಯುತ್ತವೆ. ವ್ಯವಸ್ಥೆಯನ್ನು ಸರಳಗೊಳಿಸಿ ಮತ್ತಷ್ಟು ಸುಲಭಗೊಳಿಸುವ ಮತ್ತು ಭಾರತದಾದ್ಯಂತ ಪ್ರತಿ ಮನೆಗೂ ಸಂತೋಷ ಉಂಟು ಮಾಡುವ ನೈಜ ಜನಕೇಂದ್ರಿತ ಸುಧಾರಣೆ ಇದಾಗಿದೆ ಎಂದು ತಿಳಿಸಿದ್ದಾರೆ.

## ಜಿಲ್ಲೆಯ 10 ಶಿಕ್ಷಕರಿಗೆ ಆದರ್ಶ ಶಿಕ್ಷಕ ಪ್ರಶಸ್ತಿ

• ಪ್ರಜೋದಯ ವರದಿ

**ಹಾಸನ:** ಕರ್ನಾಟಕ ವಚನ ಸಾಹಿತ್ಯ ಪರಿಷತ್ ಹಾಗು ಪ್ರೊ.ಬಿ.ಕೃಷ್ಣಪ್ಪ ಟ್ರಸ್ಟ್ ವತಿಯಿಂದ ಕೊಡಮಾಡುವ 2025ನೇ ಸಾಲಿನ ರಾಜ್ಯ ಮಟ್ಟದ ಆದರ್ಶ ಶಿಕ್ಷಕ ಪ್ರಶಸ್ತಿಗೆ ಹಾಸನದ 10 ಸೇರಿ ರಾಜ್ಯದ 30 ಶಿಕ್ಷಕರು ಭಾಜನ ರಾಗಿದ್ದಾರೆ.

ಸೆ.7ರ ಭಾನುವಾರ ಬೆಳಿಗ್ಗೆ 10 ಗಂಟೆಗೆ ಬೆಂಗಳೂರಿನ ಚಿತ್ರಕಲಾ ಪರಿಷತ್ ಸಭಾಂಗಣದಲ್ಲಿ ಸಮಾರಂಭ ಆಯೋಜಿಸಲಾಗಿದ್ದು, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಉದ್ಘಾಟನೆ ನೆರವೇರಿಸಲಿದ್ದಾರೆ. ಡಾ.ಎಸ್.ಜಿ. ಸುಶೀಲಮ್ಮ ಅಧ್ಯಕ್ಷತೆ ವಹಿಸುವರು. ವಚನ ಸಾಹಿತ್ಯ ಪರಿಷತ್ ರಾಜ್ಯಾಧ್ಯಕ್ಷ ಎಂ.ವಿ. ತ್ಯಾಗರಾಜ್ ಅವರು ಆಶಯ ನುಡಿಗಳನ್ನಾಡುವರು. ಪತ್ರಕರ್ತ ರವಿ ನಾಕಲಗೂಡು ಮುಖ್ಯ ಭಾಷಣ ಮಾಡಲಿದ್ದಾರೆಂದು ಎಂ.ವಿ. ತ್ಯಾಗರಾಜ್ ತಿಳಿಸಿದ್ದಾರೆ.

**ಜಿಲ್ಲೆಯ ಸಾಧಕ ಶಿಕ್ಷಕರ ವಿವರ**

ಬೇಲೂರು ಬಾಲಕಿಯರ ಸರ್ಕಾರಿ ಪಿಯು ಕಾಲೇಜು ಇತಿಹಾಸ ಉಪನ್ಯಾಸಕ ಡಿ.ಧರ್ಮೇಗೌಡ, ಮಂಡಿಗನಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಸಹ ಶಿಕ್ಷಕ ಪುಟ್ಟಣ್ಣ ನಂದ ಕುಮಾರ್, ಆಲೂರಿನ ಬ್ಯಾಬ ಕಾಲೋನಿ 1 ಸ.ಕಿ.ಪ್ರಾ. ಶಾಲೆ ಸಹ ಶಿಕ್ಷಕ ಸೋಮನಾಯಕ್, ಹಾಸನ ದೇವೇಗೌಡ ನಗರದ ಸಿಆರ್‌ಪಿ ಎಂ.ಟಿ. ಲೋಕೇಶಗೌಡ, ಅರಸೀಕೆರೆ ತಾಲ್ಲೂಕು ಚಿಕ್ಕಣ್ಣನಕೊಪ್ಪಲು ಸ.ಹಿ. ಪ್ರಾ. ಶಾಲೆ ಸಹ ಶಿಕ್ಷಕಿ ಹೆಚ್.ಹೆಚ್.ಸೌಭಾಗ್ಯ, ಹೊಳೆನರಸೀಪುರ ತಾಲ್ಲೂಕು ಕೋಟೆ ಪಿ.ಎಂ.ಶ್ರೀ ಶಾಲೆ ಸಹ ಶಿಕ್ಷಕಿ ಕೆ.ಎನ್.ಪುಷ್ಪಲತಾ, ಅರಕಲಗೂಡು ತಾಲ್ಲೂಕು ಮರಡಿ ಸ.ಕಿ.ಪ್ರಾ. ಶಾಲೆ ಸಹ ಶಿಕ್ಷಕ ಪರಮೇಶ, ಹಾಸನ ಚನ್ನಪಟ್ಟಣ ಸರ್ಕಾರಿ ಶಾಲೆ ಶಿಕ್ಷಕ ಕೆ.ಎಂ.ಹರೀಶ, ಆಲೂರು ತಾಲ್ಲೂಕು ದೇವರಾಜಪುರ ಸ.ಕಿ.ಪ್ರಾ.ಶಾಲೆ ಸಹ ಶಿಕ್ಷಕಿ ಸಿ.ಆರ್. ಅನ್ನಪೂರ್ಣ, ಮರ್ಕುಲಿ ಸ.ಹಿ.ಪ್ರಾ. ಶಾಲೆ ಸಹ ಶಿಕ್ಷಕ ಮಂಜುನಾಥ್ ಅವರು ಪ್ರಶಸ್ತಿಗೆ ಭಾಜನರಾಗಿದ್ದಾರೆ.

## ಡಿಸಿಸಿ ಬ್ಯಾಂಕ್ ಅಧ್ಯಕ್ಷರಾಗಿ ಕೆ.ಎನ್.ರಾಜಣ್ಣ ಆಯ್ಕೆ

• ಪ್ರಜೋದಯ ವರದಿ

**ತುಮಕೂರು:** ಮಾಜಿ ಸಚಿವ ಕೆ.ಎನ್.ರಾಜಣ್ಣ ಅವರು ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಅಧ್ಯಕ್ಷರಾಗಿ 7ನೇ ಬಾರಿಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

14 ನಿರ್ದೇಶಕರನ್ನು ಒಳಗೊಂಡ ಆಡಳಿತ ಮಂಡಳಿ ರಾಜಣ್ಣ ಅವರನ್ನು ಅಧ್ಯಕ್ಷರಾಗಿ ಆಯ್ಕೆ ಮಾಡಿದ್ದು, ಜಿಲ್ಲೆಯ ಸಹಕಾರಿ ಕ್ಷೇತ್ರದಲ್ಲಿ ಅವರ ಪ್ರಾಬಲ್ಯವನ್ನು ಸಾಬೀತುಪಡಿಸಿದೆ. ರಾಜಣ್ಣ ಕರ್ನಾಟಕದ ಸಹಕಾರಿ ಕ್ಷೇತ್ರದಲ್ಲಿ 1972 ರಿಂದಲೂ ತಮ್ಮ ಪ್ರಭಾವ ಸ್ಥಾಪಿಸಿದ್ದಾರೆ. ಸಹಕಾರ ಸಚಿವರಾಗಿದ್ದ ರಾಜಣ್ಣ ಅವರನ್ನು ಇತ್ತೀಚೆಗೆ ಕಾಂಗ್ರೆಸ್ ಹೈಕಮಾಂಡ್ ವಜಾ ಮಾಡಿದೆ.

# ವಸತಿ ಗೋಲ್ಮಾಲ್: ಅಧಿಕಾರಿಗಳ ಮೇಲೆ ಕ್ರಮ ಯಾವಾಗ ?

## ಜಿಲ್ಲಾದ್ಯಂತ ಪಿಎಂಎವೈ ಅವ್ಯವಹಾರ | ಹಂಗಾಮಿ ನೌಕರರ ತಲೆಗೆ ಕಟ್ಟಿ ಕೈತೊಳೆದುಕೊಳ್ಳುವ ಹುನ್ನಾರ

• ಪ್ರಜೋದಯ ವರದಿ

**ಹಾಸನ:** ಜಿಲ್ಲಾದ್ಯಂತ ಪ್ರಧಾನ ಮಂತ್ರಿ ಆವಾಸ್ ಯೋಜನೆ (ಪಿಎಂ ಎವೈ)ಯಡಿ ಭಾರೀ ಗೋಲ್ಮಾಲ್ ನಡೆದ್ದರೂ ಬೇಜವಾಬ್ದಾರಿ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮ ಕೈ ಗೊಳ್ಳದೆ ಎಲ್ಲವನ್ನೂ ಹಂಗಾಮಿ ನೌಕರನ ತಲೆಗೆ ಕಟ್ಟಿ ಕೈತೊಳೆದುಕೊಳ್ಳುವ ಹುನ್ನಾರ ನಡೆಸಲಾಗುತ್ತದೆಂಬ ಅನುಮಾನ ವ್ಯಕ್ತವಾಗುತ್ತಿದೆ.

ಪಿಎಂಎವೈ ಯೋಜನೆಯಡಿ ಸಕಲೇಶಪುರ ತಾಲ್ಲೂಕು ಒಂದರಲ್ಲೇ 2 ಕೋ. ರೂ.ಗೂ ಅಧಿಕ ವಂಚನೆ ಮಾಡಿರುವ ಪ್ರಕರಣ ಬಯಲಿಗೆ ಬಂದ ಬಳಿಕ ಅರಸೀಕೆರೆ ತಾಲ್ಲೂಕಿನಲ್ಲಿ ನಡೆದಿರುವ ಅಕ್ರಮ ಬೆಳಕಿಗೆ ಬಂದಿದೆ. ಉಳಿದ ತಾಲ್ಲೂಕುಗಳಲ್ಲಿ ಇದೇ ರೀತಿ ಕೋಟ್ಯಾಂತರ ರೂ. ಗೋಲ್ಮಾಲ್ ನಡೆದಿದೆ. ಜಿಲ್ಲಾ



ಮತ್ತು ತಾಲ್ಲೂಕು ಪಂಚಾಯಿತಿ ಅಧಿಕಾರಿಗಳು ತಮ್ಮ ಬುಡಕ್ಕೆ ಬರುತ್ತದೆಂಬ ಕಾರಣಕ್ಕೆ ದೂರು ದಾಖಲಿಸದೆ, ಎಲ್ಲಾ ಅಕ್ರಮ ಗಳನ್ನು ಹಂಗಾಮಿ ನೌಕರರ ತಲೆಗೆ ಕಟ್ಟಲು ಅಧಿಕಾರಿಗಳು ಮುಂದಾಗಿದ್ದಾರೆಂಬ ಆರೋಪ ಕೇಳಿ ಬಂದಿದೆ.

**ಬಡಜನರಿಗೆ ಕಿರುಕುಳ**

ಅವ್ಯವಹಾರಕ್ಕೆ ಸಂಬಂಧಪಟ್ಟಂತೆ ಜಿಲ್ಲಾ ವಸತಿ ನೋಡಲ್ ಅಧಿಕಾರಿ ಕೆ.ಎಂ.ರಾಜೇಶ್ ವಿರುದ್ಧ ಸಕಲೇಶ ಪುರ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಜಿ.ಡಿ. ಗಂಗಾಧರನ್ ಅವರು ದೂರು ನೀಡಿ ದ್ದರಿಂದ ಪ್ರಕರಣ ದಾಖಲಿಸಿಕೊಂಡ ಪೊಲೀಸರು, ಸಮಗ್ರವಾಗಿ ತನಿಖೆ ನಡೆಸಿ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸುವ ಬದಲು ಅರ್ಧಂಬರ್ಧ ಮನೆ ಕಟ್ಟಿಕೊಂಡು, ಗುಡಿಸಲು, ಶಿಥಿಲಗೊಂಡಿರುವ ಬಡ ಜನರಿಗೆ ನೋಟೀಸ್ ನೀಡಿ ವಿಚಾರಣೆಗೆ ಒಳಪಡಿಸಿ, ಅವರ ಬ್ಯಾಂಕ್ ಖಾತೆಯನ್ನು ಫ್ರೀಜ್ ಮಾಡಿ ಕಿರುಕುಳ ನೀಡುತ್ತಿದ್ದಾರೆ.

» ನಾಲ್ಕನೇ ಪುಟದಲ್ಲಿ

**ಜಿಲ್ಲಾ ಪಂಚಾಯಿತಿಯಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರ**

ಜಿಲ್ಲಾ ಪಂಚಾಯಿತಿಯಲ್ಲಿ ವಸತಿ ಯೋಜನೆ ಮಾತ್ರವಲ್ಲದೇ ನರೇಗಾ ಯೋಜನೆಯಡಿ ಕೋಟಿ ಕೋಟಿ ಭ್ರಷ್ಟಾಚಾರ ನಡೆದಿದೆ. ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಂದ ಹಿಡಿದು, ಜಿಲ್ಲಾ ಪಂಚಾಯಿತಿ ಅಧಿಕಾರಿಗಳು ಭಾಗಿಯಾಗಿದ್ದಾರೆ. ಕಾಂಕ್ರೀಟ್ ರಸ್ತೆ, ಚರಂಡಿ ನಿರ್ಮಾಣ, ಸ್ಮಶಾನ ಅಭಿವೃದ್ಧಿ, ನೀರಿನ ಟ್ಯಾಂಕ್‌ಗಳ ನಿರ್ಮಾಣದಲ್ಲಿ ಸಾಕಷ್ಟು ಅವ್ಯವಹಾರಗಳು ನಡೆದಿದ್ದರೂ ಯಾರೊಬ್ಬರು ಕೇಳುವವರಿಲ್ಲದಂತಾಗಿದೆ.

**ಚುನಾಯಿತ ಪ್ರತಿನಿಧಿಗಳಿಲ್ಲದೆ ಅದ್ವಾನ**

ಕಳೆದ ನಾಲ್ಕು ವರ್ಷಗಳಿಂದ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿಯಲ್ಲಿ ಚುನಾಯಿತ ಜನಪ್ರತಿನಿಧಿಗಳು ಇಲ್ಲದಿರುವುದರಿಂದ ಅಧಿಕಾರಿಗಳನ್ನು ಹೇಳುವವರು, ಕೇಳುವವರು ಇಲ್ಲದಿರುವುದರಿಂದ ಜಿಲ್ಲಾ ಪಂಚಾಯಿತಿ ಆಡಳಿತ ಅದ್ವಾನಗೊಂಡಿದೆ ಎಂದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರು ಆರೋಪಿಸಿದ್ದಾರೆ. ಸೌಲಭ್ಯಗಳು ಜನರಿಗೆ ಸರಿಯಾಗಿ ತಲುಪುತ್ತಿಲ್ಲ, ಅಧಿಕಾರಿಗಳ ನಡೆಯನ್ನು ಪ್ರಶ್ನಿಸುವಂತಿಲ್ಲದಂತಾಗಿದೆ. ಕೂಡಲೇ ಸರ್ಕಾರ ಸ್ಥಳೀಯ ಸಂಸ್ಥೆ ಚುನಾವಣೆ ನಡೆಸುವಂತೆ ಒತ್ತಾಯಿಸಿದ್ದಾರೆ.

# ಅತಿಥಿ ಉಪನ್ಯಾಸಕರ ನೇಮಕ ವಿಳಂಬ : ನಡೆಯದ ತರಗತಿ

## ವಿದ್ಯಾರ್ಥಿಗಳು ಬೀದಿಗಿಳಿಯುವ ಎಚ್ಚರಿಕೆ : ಸಂಘಟನೆಗಳ ಆಕ್ರೋಶ

• ಪ್ರಜೋದಯ

**ಹಾಸನ:** ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರನ್ನು ಮರು ನೇಮಕ ಮಾಡಿಕೊಳ್ಳದಿರುವುದರಿಂದ ತರಗತಿಗಳು ನಡೆಯದೆ ವಿದ್ಯಾರ್ಥಿಗಳು ಸಮಸ್ಯೆ ಅನುಭವಿಸುವಂತಾಗಿದೆ ಎಂದು ವಿದ್ಯಾರ್ಥಿ ಸಂಘಟನೆಗಳು ಆಕ್ರೋಶ ವ್ಯಕ್ತಪಡಿಸಿವೆ.

ಪದವಿ ಕಾಲೇಜುಗಳ ತರಗತಿಗಳು ಆಗಸ್ಟ್ ತಿಂಗಳಿಂದಲೇ ಆರಂಭವಾಗಿವೆ. ಆದರೆ, 2024-25ನೇ ಸಾಲಿಗೆ 10 ತಿಂಗಳ ಅವಧಿಗೆ ನೇಮಕ ಮಾಡಿಕೊಂಡಿದ್ದ ಅತಿಥಿ ಉಪನ್ಯಾಸಕರನ್ನು, ಅವಧಿ ಮುಗಿದ ಹಿನ್ನಲೆ ಆಗಸ್ಟ್ 4 ರಂದೇ ಕರ್ತವ್ಯದಿಂದ ಬಿಡುಗಡೆಗೊಳಿಸಲಾಗಿಸಿದ್ದು, ಮರು ನೇಮಕ ಮಾಡಿಕೊಂಡಿಲ್ಲ. ಬೋಧಕರಿಲ್ಲದೆ




ವಿದ್ಯಾರ್ಥಿಗಳ ಕಲಿಕೆಗೆ ಅಡ್ಡಿಯುಂಟಾಗಿದೆ. ಜಿಲ್ಲೆಯಲ್ಲಿ ಒಟ್ಟು 27 ಸರ್ಕಾರಿ ಪದವಿ ಕಾಲೇಜುಗಳಿವೆ. 13 ರಿಂದ 14 ಸಾವಿರ ವಿದ್ಯಾರ್ಥಿಗಳು ವಿವಿಧ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ. ಉಪನ್ಯಾಸಕರಿಲ್ಲದೆ ವಿದ್ಯಾರ್ಥಿಗಳು ಬೀದಿಗಿಳಿದು ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಲಾಗಿದೆ.

ಜಿಲ್ಲೆಯ ಬಹುತೇಕ ಕಾಲೇಜುಗಳಲ್ಲಿ ಶೇ.30 ರಷ್ಟು ಖಾಯಂ ಉಪನ್ಯಾಸಕರಿದ್ದರೆ, ಶೇ.70ಷ್ಟು ಅತಿಥಿ ಉಪನ್ಯಾಸಕರಿದ್ದಾರೆ. ನಗರದ ಗಂಧದಕೋಠಿಯಲ್ಲಿರುವ ಸರ್ಕಾರಿ ಮಹಿಳಾ ಕಾಲೇಜಿನಲ್ಲಿ 10 ಮಂದಿ ಖಾಯಂ ಉಪನ್ಯಾಸಕರಿದ್ದರೆ, 31 ಮಂದಿ ಅತಿಥಿ ಉಪನ್ಯಾಕರ ತಂಡವಿದೆ. ಜಿಲ್ಲೆಯಲ್ಲಿ ಸುಮಾರು 500-600 ಮಂದಿ ಅತಿಥಿ ಉಪನ್ಯಾಸಕರಿದ್ದು, ಇಷ್ಟೂ ಮಂದಿ ಈಗ ಹೊರಗೆ ಇರುವುದರಿಂದ ಇವರು ಬೋಧನೆ ಮಾಡುತ್ತಿದ್ದ ವಿಷಯಗಳ ಒಂದೇ ಒಂದು ತರಗತಿ ನಡೆಯುತ್ತಿಲ್ಲವೆಂದು ದೂರಿದ್ದಾರೆ.

ಹಿಂದಿನ ಬಿಜೆಪಿ ಸರ್ಕಾರ ಸಮಿತಿ ರಚಿಸಿ, ಅದರಿಂದ ವರದಿ ಪಡೆದು ಅತಿಥಿ ಉಪನ್ಯಾಸಕರ ಸಂಬಳ ಹೆಚ್ಚಳ ಮಾಡುವುದರ ಜೊತೆಗೆ ಕೆಲವು ಸೌಲಭ್ಯಗಳನ್ನೂ ಕಲ್ಪಿಸಿತು. ಮುಂದುವರಿದು ಅತಿಥಿ ಉಪನ್ಯಾಸಕರು ಮುಂದಿನ ಮೂರು ವರ್ಷದೊಳಗೆ ಕಡ್ಡಾಯವಾಗಿ ಎನ್‌ಇಟಿ ಹಾಗು ಎಸ್‌ಎಲ್‌ಇಟಿ ಪಾಸ್ ಮಾಡಿಕೊಳ್ಳುವಂತೆ ಸೂಚನೆ

» ನಾಲ್ಕನೇ ಪುಟದಲ್ಲಿ

## ಧರ್ಮಸ್ಥಳ ಪ್ರಕರಣ: ಎನ್‌ಐಎ ತನಿಖೆಗೆ ಸಂತರ ಆಗ್ರಹ

• ಪ್ರಜೋದಯ ವರದಿ

**ನವದೆಹಲಿ:** ಧರ್ಮಸ್ಥಳ ಪ್ರಕರಣವನ್ನು ರಾಷ್ಟ್ರೀಯ ತನಿಖಾ ದಳದ (ಎನ್‌ಐಎ) ಮೂಲಕ ತನಿಖೆ ನಡೆಸಬೇಕೆಂದು ಒತ್ತಾಯಿಸಿ ಸನಾತನ ಸಂತರ ನಿಯೋಗವು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಮನವಿ ಸಲ್ಲಿಸಿತು.

ಧರ್ಮಸ್ಥಳ ಹಾಗು ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆ ವಿರುದ್ಧ ವ್ಯವಸ್ಥಿತ ಷಡ್ಯಂತ್ರ ನಡೆಯುತ್ತಿದೆ. ಇದು ಸನಾತನ ಹಾಗು ಜೈನ ಧರ್ಮದ ಮೇಲಿನ ದಾಳಿ. ಇಂತಹ ಕೃತ್ಯ ನಡೆ ಸುತ್ತಿರುವವರನ್ನು ಕೇಂದ್ರ ಸರ್ಕಾರ ಪತ್ತೆ ಹಚ್ಚಿ ಶಿಕ್ಷಿಸಬೇಕು ಎಂದು ನಿಯೋಗ ಒತ್ತಾಯಿಸಿದೆ.

# ಮಕ್ಕಳೊಂದಿಗೆ ಬಿಸಿಯೂಟ ಸೇವಿಸಿದ ಜಿಲ್ಲಾಧಿಕಾರಿ

• ಪ್ರಜೋದಯ ವರದಿ

**ಹಾಸನ:** ಶಾಲಾ ಮಕ್ಕಳ ಜೊತೆ ಸಾಲಿನಲ್ಲಿ ಕುಳಿತು ಊಟ ಮಾಡಿ ಗುಣಮಟ್ಟದ ಬಗ್ಗೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಪರೀಕ್ಷೆ ಮಾಡಿದರು.

ತಾಲ್ಲೂಕಿನ ಗೊರೂರಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ದಿಢೀರ್ ಭೇಟಿ ನೀಡಿದ ಅವರು ಬಿಸಿಯೂಟದ ಗುಣಮಟ್ಟ ಪರಿಶೀಲಿಸಿ, ಶಾಲೆಯಲ್ಲಿರುವ ಸೌಲಭ್ಯಗಳ ಬಗ್ಗೆ ಮಕ್ಕಳಿಂದ ಮಾಹಿತಿ ಪಡೆದುಕೊಂಡರು.

ತುಂತುರು ಮಳೆ ನಡುವೆಯೂ ಜಿಲ್ಲಾಧಿಕಾರಿ ಶಾಲೆಗೆ ಭೇಟಿ ನೀಡಿದ್ದರಿಂದ ಶಿಕ್ಷಕರು ಹಾಗು ಅಡುಗೆ ಸಿಬ್ಬಂದಿ ತಬ್ಬಿಬ್ಬಾದರು. ಮೊದಲಿಗೆ ಶಾಲಾ ಆವರಣ, ಆಟದ ಮೈದಾನ ವೀಕ್ಷಣೆ ಮಾಡಿದ ಅವರು ಸ್ವಚ್ಛತೆ ಕಾಪಾಡಿಕೊಳ್ಳುವಂತೆ ಸೂಚನೆ ನೀಡಿದರು. ಬಳಿಕ ಮಕ್ಕಳೊಂದಿಗೆ



ಕುಳಿತು ಊಟ ಮಾಡಿ ಗುಣಮಟ್ಟ ಪರೀಕ್ಷಿಸಿ, ಶುಚಿ, ರುಚಿಯಾದ ಗುಣಮಟ್ಟದ ಆಹಾರ ನೀಡುವಂತೆ ಶಿಕ್ಷಕರು ಹಾಗು ಸಿಬ್ಬಂದಿಗೆ ತಿಳಿಸಿದರು.

ಬಿಸಿಯೂಟ ಯೋಜನೆಯಡಿ ಸರ್ಕಾರಿ ಶಾಲಾ ಮಕ್ಕಳಿಗೆ ನೀಡುವ ಆಹಾರ ಸಾಮಾಗ್ರಿ ದುರ್ಬಳಕೆ ಆಗುತ್ತಿವೆ, ಗುಣಮಟ್ಟ ಹಾಗು ರುಚಿಕರವಾದ ಊಟ ಕೊಡುತ್ತಿಲ್ಲ ಎಂಬ ಆರೋಪ ಅನೇಕ ಕಡೆ ಕೇಳಿಬಂದ ಹಿನ್ನಲೆ ಜಿಲ್ಲಾಧಿಕಾರಿ ಶಾಲೆ ಗಳಿಗೆ ಭೇಟಿ ಪರಿಶೀಲನೆ ನಡೆಸುತ್ತಿದ್ದಾರೆ. ಜಿಲ್ಲಾಧಿಕಾರಿ ಕಾಳಜಿ ಹಾಗು ಆಡಳಿತ ವೈಖರಿಗೆ ಸ್ಥಳೀಯರು, ಸಾರ್ವಜನಿಕರು ಮೆಚ್ಚುಗೆ ವ್ಯಕ್ತ ಪಡಿಸಿ, ಆಗಾಗ್ಗೆ ಶಾಲೆಗಳಿಗೆ ಭೇಟಿ ನೀಡುವುದನ್ನು ಮುಂದುವರಿಸಿದರೆ ಸಮಸ್ಯೆಯನ್ನು ಸರಿಪಡಿಸಬಹುದು. ಗ್ರಾಮೀಣ ಮಕ್ಕಳಿಗೆ ಗುಣಮಟ್ಟದ ರುಚಿಕರ ಊಟ ಸಿಗಲಿದೆ ಎಂದರು.

ಕೆ.ಎಸ್.ಲತಾಕುಮಾರಿ ಅವರು ಜಿಲ್ಲೆಗೆ ಬಂದ ದಿನದಿಂದಲೂ ಜಿಲ್ಲಾ ಪ್ರವಾಸ, ನಗರ ಪ್ರದಕ್ಷಿಣೆ, ಜನಸ್ಪಂದನಾ ಸಭೆ ಮೂಲಕ ಆಡಳಿತ ವ್ಯವಸ್ಥೆಗೆ ಚುರುಕು ಮುಟ್ಟಿಸುವ ಕೆಲಸ ಮಾಡುತ್ತಿದ್ದಾರೆ. ಮುಂದುವರಿದ ಭಾಗ ಎಂಬಂತೆ ಸರ್ಕಾರಿ ಶಾಲೆಗೆ ಭೇಟಿ ನೀಡಿ ಬಿಸಿಯೂಟದ ಗುಣಮಟ್ಟ ಪರಿಶೀಲನೆಗೆ ಮುಂದಾಗಿದ್ದಾರೆ.

## ಅಕ್ಕಿ ಅಕ್ರಮ ದಾಸ್ತಾನು: ನಾಲ್ವರ ವಿರುದ್ಧ ಎಫ್‌ಐಆರ್

• ಪ್ರಜೋದಯ ವರದಿ

**ಸಕಲೇಶಪುರ:** ಅನ್ನಭಾಗ್ಯ ಅಕ್ಕಿಯನ್ನು ಅಕ್ರಮವಾಗಿ ದಸ್ತಾನು ಮಾಡಿದ್ದ ಪ್ರಕರಣ ಬೆಳಕಿಗೆ ಬಂದಿದ್ದು, 660 ಚೀಲ ಅಕ್ಕಿ ವಶಪಡಿಸಿಕೊಳ್ಳಲಾಗಿದೆ. ಈ ಸಂಬಂಧ ನಾಲ್ವರ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಹಾಸನ ಕೈಗಾರಿಕಾ ಪ್ರದೇಶದಲ್ಲಿರುವ ಗೋದಾಮಿನಿಂದ 660 ಚೀಲ ಅಕ್ಕಿಯನ್ನು ಸಕಲೇಶಪುರದ ಗೋದಾಮಿಗೆ ತೆಗೆದುಕೊಂಡು ಹೋಗುವಂತೆ ಸೂಚನೆ ಇತ್ತು. ರಂಗನಾಥ ಟ್ರಾನ್ಸ್‌ಪೋರ್ಟ್‌ಗೆ ಸೇರಿದ 2 ಲಾರಿಗೆ ಅಕ್ಕಿ ತುಂಬಲಾಗಿತ್ತು. ಲಾರಿ ಚಾಲಕರು ಸಕಲೇಶಪುರದ ಬದಲಿಗೆ ಬಾಳ್ಳುಪೇಟೆಯ ಜಮ್ಮನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನ್ಯಾಯಬೆಲೆ ಅಂಗಡಿಯ ತೀರ್ಥಕುಮಾರ್ ಗೋದಾಮಿಗೆ ದಾಸ್ತಾನು ಮಾಡಿದ್ದರು.

ಖಚಿತ ಮಾಹಿತಿ ಮೇರೆಗೆ ಆಹಾರ ಶಿರಸ್ತೇದಾರ್ ದ್ರಾಕ್ಷಾಯಿಣಿ ಅವರು ಸಿಬ್ಬಂದಿ ಜೊತೆಗೆ ಸ್ಥಳಕ್ಕೆ ಬಂದು ಪರಿಶೀಲಿಸಿದಾಗ ಅಕ್ರಮ ಬಯಲಾಗಿದೆ. ಪ್ರಕರಣ ಸಂಬಂಧ ರಂಗನಾಥ ಟ್ರಾನ್ಸ್‌ಪೋರ್ಟ್ ಮಾಲೀಕ ಪ್ರಮೋದ್ ಕುಮಾರ, ಜಮ್ಮನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ತೀರ್ಥಕುಮಾರ ಹಾಗು ಎರಡೂ ಲಾರಿ ಚಾಲಕರ ವಿರುದ್ಧ ಗ್ರಾಮಾಂತರ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ.

## ಸುಳಗೋಡು ಶಾಲೆ ಮುಖ್ಯಶಿಕ್ಷಕ ಕೆ.ಎಲ್.ಪುರುಷೋತ್ತಮ್‌ಗೆ ರಾಜ್ಯ ಪ್ರಶಸ್ತಿ | ಮಕ್ಕಳಲ್ಲಿ ದೇವರು ಕಂಡ ಅಕ್ಷರ ಸಂತ

# ನಿಸ್ವಾರ್ಥ ಸೇವೆಯಿಂದ ಸಾವಿರಾರು ಮಕ್ಕಳಿಗೆ ದಾರಿ ದೀಪವಾದ ಶಿಕ್ಷಕ

• ಪ್ರಜೋದಯ ವರದಿ

**ಹಾಸನ:** ಎಂಟನೇ ತರಗತಿ ಓದುವಷ್ಟರಲ್ಲಿ ಶಾಲೆಯ ಸಹವಾಸ ಬೇಡವೆಂದು ಕೃಷಿ ಕೆಲಸ ಮಾಡಿಕೊಂಡಿಕೊಂಡಿದ್ದ ವ್ಯಕ್ತಿ ನಂತರ ಛಲದಿಂದ ಓದಿ ಶಿಕ್ಷಕನಾಗಿ ಸಾವಿರಾರು ವಿದ್ಯಾರ್ಥಿಗಳ ಬಾಳಿಗೆ ಬೆಳಕಾಗಿರುವುದು ಮಾತ್ರವಲ್ಲದೆ ಪ್ರಸಕ್ತ ಸಾಲಿನ ರಾಜ್ಯ ಶಿಕ್ಷಕರ ಪ್ರಶಸ್ತಿಗೂ ಭಾಜನ ರಾಗಿದ್ದಾರೆ.

ಆಲೂರು ತಾಲ್ಲೂಕಿನ ಕುಂದೂರು ಹೋಬಳಿ ಸುಳಗೋಡು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಶಿಕ್ಷಕ ಕೆ.ಎಲ್.ಪುರುಷೋತ್ತಮ ಅವರು ಸೆ.5ರ ಶುಕ್ರವಾರ ಶಿಕ್ಷಕರ ದಿನಾಚರಣೆಯಂದು ಬೆಂಗಳೂರಿನಲ್ಲಿ ರಾಜ್ಯ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಸ್ವೀಕರಿಸಲಿದ್ದಾರೆ. ಬಾಲ್ಯದಲ್ಲಿ ಶಿಕ್ಷಣದಿಂದ ವಿಮುಖರಾಗಿ ಈಗ ವಿದ್ಯೆ ಕಲಿಸುವ ಗುರುವಾಗಿ, ಮಕ್ಕಳ ಪಾಲಿನ ಆಪದ್ಬಾಂಧವರಾಗಿ ಸರ್ಕಾರಿ ಶಾಲೆ ಉಳಿಯಬೇಕೆಂದು ಪಣತೊಟ್ಟು ವೈಯಕ್ತಿಕ ಬದುಕಿನ ಜೊತೆಗೆ ಶಾಲೆಯ ಏಳಿಗೆಗೂ ಶ್ರಮ ವಹಿಸುತ್ತಿದ್ದಾರೆ. ಪುರುಷೋತ್ತಮ ಅವರ ಯಶೋಗಾಥೆ ಶ್ಲಾಘನೀಯವಾಗಿದೆ.

**ಮುಚ್ಚುವ ಆತಂಕದಲ್ಲಿದ್ದ ಶಾಲೆ**

ಮಲೆನಾಡು ಭಾಗದಲ್ಲಿ ಕಾಡಾನೆಗಳ ಹಾವಳಿ, ಖಾಸಗಿ ಶಾಲೆಗಳ ಮೇಲಿನ ವ್ಯಾಮೋಹ ಹಾಗು ಸರ್ಕಾರಿ ಶಾಲೆಗಳಲ್ಲಿ ಸೌಕರ್ಯಗಳ ಕೊರತೆಯಿಂದ ವರ್ಷದಿಂದ ವರ್ಷಕ್ಕೆ ಸುಳಗೋಡು ಶಾಲೆಯಲ್ಲಿ ಮಕ್ಕಳ ದಾಖಲಾತಿ ಕುಸಿಯುತ್ತಲೇ ಇತ್ತು. 2019ರ ಜೂನ್ 11ರಂದು ವರದಿ ಮಾಡಿಕೊಂಡ ಪುರುಷೋತ್ತಮ ಅವರು ಶಾಲೆಯ ವ್ಯವಸ್ಥೆ ಕಂಡು ಅದಕ್ಕೆ ಬೇರೆ ರೂಪ ಕಲ್ಪಿಸ ಬೇಕೆಂದು ನಿರ್ಧರಿಸಿದರು. ಶಾಲೆಗೆ ಅಗತ್ಯ ಸೌಕರ್ಯ ಕಲ್ಪಿಸಿದರೆ ಹಾಗು ಗುಣಮಟ್ಟದ ಕಲಿಕೆ ಅಳವಡಿಸಿಕೊಂಡರೆ ಪೋಷಕರು ತಮ್ಮ ಮಕ್ಕಳನ್ನು ಸೇರಿಸುತ್ತಾರೆಂದು ಆ ನಿಟ್ಟಿನಲ್ಲಿ ಮುತುವರ್ಜಿ ವಹಿಸಿ ಹಲವು ಯೋಜನೆ ರೂಪಿಸಿದರು. ಈ ಹಿಂದೆ ಕೆರೆಹಳ್ಳಿ ಪೂರ್ವ ಪ್ರಾಥಮಿಕ ಶಾಲೆಯಲ್ಲಿ 11 ವರ್ಷ, ಹುಣಸವಳ್ಳಿಯಲ್ಲಿ 3 ವರ್ಷ ಕೆಲಸ ಮಾಡಿದ್ದ ಅವರು ಮಕ್ಕಳ ಕಲಿಕೆಗೆ ಪೂರಕ ವಾತಾವರಣ ಸೃಷ್ಟಿಸಿದ್ದರು. ಅದೇ ಸಂಪ್ರದಾಯವನ್ನು ಸುಳಗೋಡಿನಲ್ಲೂ ಮುಂದುವರೆಸಿದ್ದರಾದರೂ ದಾಖಲಾತಿ ಕೊರತೆಯಿಂದ ಶಾಲೆ ಮುಚ್ಚಬಾರದೆಂಬ ಕಾರಣಕ್ಕೆ ಶಾಶ್ವತ ಪರಿಕರ ಕಲ್ಪಿಸಲು ಕ್ರಮ ವಹಿಸಿದರು.

ಕುಟುಂಬಸ್ಥರು, ಗ್ರಾಮಸ್ಥರು ಹಾಗು ವೈಯಕ್ತಿಕ ಖರ್ಚಿನಿಂದ ಶಾಲೆಗೆ ಪ್ರೊಜೆಕ್ಟರ್, ನಲಿ- ಕಲಿ ಚೇರ್, ಗ್ರೀನ್ ಬೋರ್ಡ್, ಸಿಸಿ ಟಿವಿ ಕ್ಯಾಮರಾ, ಕಂಪ್ಯೂಟರ್ ವ್ಯವಸ್ಥೆ ಮಾಡಿದರು. 2023-24ನೇ ಸಾಲಿನಲ್ಲಿ ಕಾಂಪೌಂಡ್ ನಿರ್ಮಿಸಿ ಗೋಡೆಗೆ ಬಿತ್ತಿಪತ್ರ ಬರೆಸುವ ಮೂಲಕ ವಿದ್ಯಾರ್ಥಿ ಸ್ನೇಹಿ ವಾತಾವರಣ ಸೃಷ್ಟಿಸಿದ್ದಾರೆ. ಶಾಲೆ ಮುಂಭಾಗ ಚರಂಡಿ



ವ್ಯವಸ್ಥೆ ಹಾಳಾಗಿದ್ದನ್ನು ಅರಿತು 33 ಸಾವಿರ ರೂ. ವೈಯಕ್ತಿಕ ಹಣ ಖರ್ಚು ಮಾಡಿ ಸ್ಲ್ಯಾಬ್ ಹಾಗು ಕಾಂಕ್ರಿಟ್ ವ್ಯವಸ್ಥೆ ಮಾಡಿದ್ದಾರೆ.

**ಸ್ವಂತ ವಾಹನದ ಪರಿಕಲ್ಪನೆ**

ಸರ್ಕಾರಿ ಶಾಲೆಗೆ ಮಕ್ಕಳು ಬಾರದೆ ಇರಲು ಸಾರಿಗೆ ವ್ಯವಸ್ಥೆ ಸಮರ್ಪಕವಾಗಿಲ್ಲ ಎಂಬುದನ್ನು ಅರಿತು ಶಿಕ್ಷಕ ಸ್ವಂತ ವಾಹನ ಹೊಂದುವ ಯೋಚನೆಯನ್ನು ಸಹೋದ್ಯೋಗಿಗಳ ಮುಂದಿಟ್ಟರು. ಅದಕ್ಕೆ ಎಲ್ಲರೂ ಸಕಾರಾತ್ಮಕವಾಗಿ ಸ್ಪಂದಿಸಿದರಾದರೂ ಹಣ ಹಾಗು ನಿರ್ವಹಣೆ ಜವಾಬ್ದಾರಿ ಹೇಗೆಂಬ ಪ್ರಶ್ನೆ ಉದ್ಭವ ವಾಯಿತು. ಅದಕ್ಕೆ ತಲೆ ಕೆಡಿಸಿಕೊಳ್ಳದ ಪುರುಷೋತ್ತಮ್ ಅವರು ಬ್ಯಾಂಕ್‌ನಲ್ಲಿ ಲೋನ್ ಪಡೆದು ವಾಹನ ತರೋಣ.

> ಮಕ್ಕಳ ಹೆಸರಿನಲ್ಲಿ ಅನ್ನ ತಿನ್ನುವ ಸೌಭಾಗ್ಯವನ್ನು ದೇವರು ಕರುಣಿಸಿದ್ದಾನೆ. ನಾನು ಇಲ್ಲಿಯವರೆಗೆ ಯಾವ ದೇವಸ್ಥಾನಕ್ಕೂ ಹೋಗಿಲ್ಲ, ಕೈ ಮುಗಿದಿಲ್ಲ. ಮಕ್ಕಳಲ್ಲೇ ದೇವರನ್ನು ಕಾಣುತ್ತೇನೆ. ನನ್ನ ಸೇವೆ ಪರಿಗಣಿಸಿ ರಾಜ್ಯ ಪ್ರಶಸ್ತಿಗೆ ಆಯ್ಕೆ ಮಾಡಿರುವುದು ಸಂತಸ ತಂದಿದೆ.
> -ಕೆ.ಎಲ್.ಪುರುಷೋತ್ತಮ್, ಮುಖ್ಯ ಶಿಕ್ಷಕ




ಚಾಲನೆಯ ಜವಾಬ್ದಾರಿ ನನಗೆ ಬಿಟ್ಟುಬಿಡಿ. ಒಟ್ಟಿನಲ್ಲಿ ಸರ್ಕಾರಿ ಶಾಲೆಯಿಂದ ಮಕ್ಕಳು ವಿಮುಖರಾಗಬಾರದು ಎನ್ನುವು ದಷ್ಟೇ ತಮ್ಮ ಧ್ಯೇಯವೆಂದು ಹೇಳಿಬಿಟ್ಟರು. ಎಲ್ಲರೂ ನಿರೀಕ್ಷಿಸಿದಂತೆ ಬ್ಯಾಂಕ್‌ನಲ್ಲಿ ಸರ್ಕಾರಿ ಶಾಲೆಗೆ ಆರ್ಥಿಕ ಸಹಾಯ ದೊರೆಯಲಿಲ್ಲ. ಅದರಿಂದ ವಿಚಲಿತರಾಗದ ಅವರು ಸ್ವತ: 1.50 ಲಕ್ಷ ರೂ., ಸಂಬಂಧಿಕರು ಹಾಗು ಸ್ನೇಹಿತರ ಬಳಿ ಬಡ್ಡಿ ರಹಿತ 3 ಲಕ್ಷ ಸಾಲ ಪಡೆದು ಅಂದುಕೊಂಡಂತೆ ವಾಹನವನ್ನು ತಂದೇ ಬಿಟ್ಟರು. ಸುತ್ತಲಿನ ಮೆರ್ವೆ, ಮುದ್ದನಹಳ್ಳಿ, ಗರಿಘಟ್ಟ, ಮಂದಿರಾ ಗ್ರಾಮ ಗಳಿಗೆ ನಿತ್ಯ ಬೆಳಿಗ್ಗೆ ತಾವೇ ವಾಹನ ಓಡಿಸಿ ಕೊಂಡು ಹೋಗಿ ಮಕ್ಕಳನ್ನು ಶಾಲೆಗೆ ಕರೆತರು ತ್ತಿದ್ದರು. ಇತ್ತೀಚೆಗೆ ಸಮಯದ ಅಭಾವ ದಿಂದಾಗಿ ಚಾಲಕನ ನೇಮಿಸಿಕೊಂಡಿದ್ದಾರೆ. ದಾನಿಗಳು ಹಾಗು ಸ್ವಂತ ಶ್ರಮದ ಹಣವನ್ನು ವಿನಿಯೋಗಿಸಿ ಅಂದಾಜು 15 ಲಕ್ಷ ರೂ. ಮೌಲ್ಯದ ಆಸ್ತಿಯನ್ನು ಶಾಲೆಗಾಗಿ ವಿನಿಯೋಗ ಮಾಡಿದ್ದಾರೆ.

**ಕೃಷಿಕ ಶಿಕ್ಷಕನಾಗಿದ್ದು ಹೇಗೆ**

ಹೊಳೆನರಸೀಪುರ ತಾಲ್ಲೂಕಿನ ಕಬ್ಬಿನಹಳ್ಳಿ ಗ್ರಾಮದ ಪುರುಷೋತ್ತಮ ಅವರು ನಿವೃತ್ತ ಮುಖ್ಯ ಶಿಕ್ಷಕ ಕೆ.ಲಕ್ಕೇಗೌಡ ಮತ್ತು ಹೆಚ್.ಕೆ. ರುಕ್ಮಿಣಿ ದಂಪತಿ ಪುತ್ರ. ಆರ್ಥಿಕವಾಗಿ ಸಬಲರಾಗಿದ್ದರೂ ತಂದೆ ಲಕ್ಕೇಗೌಡ ಆಡಂಬರದ ಬದುಕು ಕಲಿಸಲಿಲ್ಲ. ಬಡ ಕುಟುಂಬ ಹೇಗಿರುತ್ತೋ ಹಾಗೆ ಬದುಕುತ್ತಿದ್ದೆವು. ಎಂಟನೇ ತರಗತಿ ಮುಗಿಯುತ್ತಿದ್ದಂತೆ ನನಗೆ ಓದು ಸಾಕೆನಿಸಿ ಕೃಷಿ ಕೆಲಸದತ್ತ ಗಮನ ಹರಿಸಿದೆ. ಆದರೆ ತಮ್ಮ ಓದು ಮುಂದುವರೆಸಿ ಶಿಕ್ಷಕನೂ ಆದ. ನನಗಿಂತ ಚಿಕ್ಕವನು ಶಿಕ್ಷಕನಾದನಲ್ಲ ಎಂಬ ಕೀಳರಿಮೆ ಕಾಡತೊಡಗಿತು. ನಾನು ಅವನಂತೆ ಆಗಬೇಕೆಂದು ನಿರ್ಧರಿಸಿ ಪರೀಕ್ಷೆ ಕಟ್ಟಿ ಎಸ್‌ಎಸ್‌ಎಲ್‌ಸಿ ಹಾಗು ಪಿಯುಸಿ ಪಾಸು ಮಾಡಿಕೊಂಡೆ. ಡಿಇಡಿ ತರಬೇತಿ ಪೂರ್ಣಗೊಳಿಸಿ 1998ರಲ್ಲಿ ಶಿಕ್ಷಕ ವೃತ್ತಿಗೆ ನೇಮಕಗೊಂಡೆ ಎಂದು ಪುರುಷೋತ್ತಮ್ ಸ್ಮರಿಸಿದರು.

## ಹರಿಹರಪುರ ಶ್ರೀಧರ್‌ಗೆ ಕಪಾಲಿಶಾಸ್ತ್ರಿ ಪ್ರಶಸ್ತಿ

• ಪ್ರಜೋದಯ ವರದಿ

**ಬೆಂಗಳೂರು:** ಭಾರತೀಯ ಸಂಸ್ಕೃತಿ ಪ್ರಸಾರ ಹಾಗು ಸಂಶೋಧನೆಯಲ್ಲಿ ನಿರತ ವಿದ್ವಾಂಸರಿಗೆ ನೀಡುವ ಕಪಾಲಿಶಾಸ್ತ್ರಿ ವಾರ್ಷಿಕ ಪ್ರಶಸ್ತಿಗೆ ಹಾಸನದ ಹರಿಹರಪುರ ಶ್ರೀಧರ್ ಸೇರಿ ನಾಲ್ವರು ಆಯ್ಕೆಯಾಗಿದ್ದಾರೆ.



ಕಳೆದ 25 ವರ್ಷಗಳಿಂದ ಕಪಾಲಿ ಶಾಸ್ತ್ರಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ. ಡಾ.ಜಿ. ರಾಮಚಂದ್ರ ಭಟ್ ಕೋಟೆಮನೆ, ಡಾ.ಯೋಗೇಶ ನಾಯ್ಕರ್, ಹರಿಹರಪುರ ಶ್ರೀಧರ್, ಪ್ರೊ. ವಿರೂಪಾಕ್ಷ ಜಡ್ಡಿ ಪಾಲ್ ಭಾಜನರಾಗಿದ್ದಾರೆ. ಸೆ.7ರ ಬೆಳಿಗ್ಗೆ 11 ಗಂಟೆಗೆ ಬಸವನಗುಡಿ ನ್ಯಾಷನಲ್ ಕಾಲೇಜ್‌ನ ಮಲ್ಟಿಮೀಡಿಯ ಹಾಲ್‌ನಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು.

15 ವರ್ಷಗಳಿಂದ ಅಗ್ನಿಹೋತ್ರ ಪ್ರಚಾರ ಕಾರ್ಯದಲ್ಲಿ ನಿರತರಾಗಿರುವ ಹಾಗು ಆರೋಗ್ಯ, ನೆಮ್ಮದಿ ಜೀವನ, ಪ್ರಗತಿಗೆ ನೆರವಾಗಬಲ್ಲ ಅಗ್ನಿಹೋತ್ರ ದೀಕ್ಷೆಯನ್ನು ನಾಡಿನಾದ್ಯಂತ ಸಾವಿರಕ್ಕೂ ಹೆಚ್ಚು ಜನರಿಗೆ ನೀಡಿದ ಸೇವೆ ಗುರುತಿಸಿ ಹರಿಹರಪುರ ಶ್ರೀಧರ್ ಅವರನ್ನು ಪರಿಗಣಿಸಲಾಗಿದೆ.

C M Y K C M Y K C M Y K C M Y K

# ಪಾಕಿಸ್ತಾನ ದುಸ್ಸಾಹಸಕ್ಕೆ ಮುಂದಾದ್ರೆ ಘೋರ ಪರಿಣಾಮ

## ಒಂದು ಹನಿ ನೀರು ಕೊಡಲು ಅವಕಾಶ ನೀಡುವುದಿಲ್ಲವೆಂದ ಪಾಕ್ ಪ್ರಧಾನಿ ಶೆಹಬಾಜ್ ಹೇಳಿಕೆಗೆ ಭಾರತ ಪ್ರತಿಕ್ರಿಯೆ

• ಪ್ರಜೋದಯ ವರದಿ

**ನವದೆಹಲಿ:** ಪಾಕಿಸ್ತಾನದ ಪ್ರಧಾನಿ ಶೆಹಭಾಜ್ ಶರೀಫ್ ಸೇರಿದಂತೆ ಅತ್ಯುನ್ನತ ನಾಯಕರು ಪದೇ ಪದೇ ಪ್ರಚೋದನಕಾರಿ ಹೇಳಿಕೆ ನೀಡುತ್ತಿರುವಂತೆಯೇ ಭಾರತ ಗುರುವಾರ ಖಡಕ್ ವಾರ್ನಿಂಗ್ ನೀಡಿದೆ. ನೀರು ಅಥವಾ ಭದ್ರತೆ ವಿಚಾರದಲ್ಲಿ ಯಾವುದೇ ದುಸ್ಸಾಹಸಕ್ಕೆ ಮುಂದಾದ್ರೆ 'ಪರಿಣಾಮ ನೆಟ್ಟಗಿರಲ್ಲ, ನೋವಿನ ಪರಿಣಾಮ ಎದುರಿಸಬೇಕಾಗುತ್ತದೆ' ಎಂದು ಎಚ್ಚರಿಕೆ ನೀಡಿದೆ.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಕ್ತಾರ ರಣಧೀರ್ ಜೈಸ್ವಾಲ್ ಅವರು, ಪಾಕಿಸ್ತಾನದಿಂದ ನಿರಂತರ ಅಜಾಗರೂಕ, ಯುದ್ಧ ಪ್ರೇರಿತ ಹಾಗೂ ದ್ವೇಷಪೂರಿತ ಹೇಳಿಕೆಯನ್ನು ಭಾರತದ ವಿದೇಶಾಂಗ ವ್ಯವಹಾರಗಳ ಸಚಿವಾಲಯ ಖಂಡಿಸಿದೆ. ಇಂತಹ ಹೇಳಿಕೆಗಳು ಭಾರತ ವಿರೋಧಿ ಭಾವನೆ ಹುಟ್ಟುಹಾಕಲು ಮತ್ತು ಆಂತರಿಕ ವೈಫಲ್ಯಗಳಿಂದ ದೂರವಿರುವ ಪಾಕಿಸ್ತಾನದ ಪ್ರಸಿದ್ಧ 'ಸಿದ್ಧ ತಂತ್ರ'ವಾಗಿದೆ ಎಂದು ಹೇಳಿದೆ.

ಇತ್ತೀಚೆಗೆ ತೋರಿಸಿದಂತೆ ಯಾವುದೇ ರೀತಿಯ ದುಸ್ಸಾಹಸಕ್ಕೆ ಮುಂದಾದ್ರೆ ತೀವ್ರ ನೋವಿನ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ. ಹೀಗಾಗಿ ಪಾಕಿಸ್ತಾನ ಇಂತಹ ಹೇಳಿಕೆ ನೀಡುವುದನ್ನು ನಿಲ್ಲಿಸಬೇಕು ಎಂದು ಅವರು ಹೇಳಿದರು.

ಪಾಕಿಸ್ತಾನದಿಂದ ಒಂದು ಹನಿ ನೀರನ್ನು ಕೊಡಲು ಭಾರತಕ್ಕೆ ಅವಕಾಶ ನೀಡುವುದಿಲ್ಲ ಎಂದು ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಶರೀಫ್ ಹೇಳಿಕೆಗೆ ಭಾರತ ಇದೀಗ ಪ್ರತಿಕ್ರಿಯಿಸಿದೆ.

ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ಒಂದು ದಿನದ ನಂತರ ಏಪ್ರಿಲ್ 23 ರಂದು ಭಾರತ 1960 ರ ಸಿಂಧು ಜಲ ಒಪ್ಪಂದ ಅಮಾನತು ನಿರ್ಧಾರವನ್ನು ತೆಗೆದುಕೊಂಡಿತ್ತು. ಈ ನಿರ್ಧಾರದ ಹಿನ್ನೆಲೆಯಲ್ಲಿ ಮಾತನಾಡಿದ ಶರೀಫ್, ನಮ್ಮ ನೀರನ್ನು ಹಿಡಿದಿಟ್ಟುಕೊಳ್ಳುವುದಾಗಿ ಬೆದರಿಕೆ ಹಾಕಿದರೆ, ನೀವು ಪಾಕಿಸ್ತಾನದ ಒಂದು ಹನಿಯನ್ನೂ ಪಡೆಯಲು ಸಾಧ್ಯವಾಗುವುದಿಲ್ಲ. ಭಾರತಕ್ಕೆ ತಕ್ಕ ಪಾಠ ಕಲಿಸಲಾಗುವುದು ಎಂದು ಎಚ್ಚರಿಸಿದ್ದರು.

ಇದೇ ನಿಲುವನ್ನು ಬೆಂಬಲಿಸಿ ಮಾತನಾಡಿದ ಮಾಜಿ ವಿದೇಶಾಂಗ ಸಚಿವ ಬಿಲಾವಲ್ ಭುಟ್ಟೋ-ಜರ್ದಾರಿ, ಸಿಂಧು ಜಲ ಒಪ್ಪಂದ ಅಮಾನತನ್ನು ಸಿಂಧೂ ಕಣಿವೆ ನಾಗರಿಕತೆಯ ಮೇಲಿನ ದಾಳಿಗೆ



ಹೋಲಿಸಿದ್ದು, ಯುದ್ಧಕ್ಕೆ ಒತ್ತಾಯಿಸಿದರೆ, ಪಾಕಿಸ್ತಾನವು ಹಿಂದೆ ಸರಿಯುವುದಿಲ್ಲ ಎಂದು ಪ್ರತಿಪಾದಿಸಿದ್ದಾರೆ. ಈ ಮಧ್ಯೆ ಪಾಕಿಸ್ತಾನದ ಸೇನಾ ಮುಖ್ಯಸ್ಥ ಜನರಲ್ ಅಸಿಮ್ ಮುನೀರ್, ಅಮೆರಿಕಕ್ಕೆ ಭೇಟಿ ನೀಡಿದಾಗ, ಸಿಂಧೂ ನದಿ ನೀರಿನ ಹರಿವನ್ನು ತಡೆಯಲು ಭಾರತ ನಿರ್ಮಿಸಬಹುದಾದ ಯಾವುದೇ ಅಣೆಕಟ್ಟನ್ನು ನಾಶಮಾಡಲಾಗುವುದು, ಸಿಂಧೂ ನದಿಯು ಭಾರತೀಯರ ಕುಟುಂಬದ ಆಸ್ತಿಯಲ್ಲ ಎಂದು ಹೇಳಿದ್ದರು.

ಮುನೀರ್ ಅವರ ಟೀಕೆಗಳನ್ನು ಭಾರತ ಬಲವಾಗಿ ಖಂಡಿಸಿದ್ದು, ಇಂತಹ ಬೆದರಿಕೆಗಳು ತನ್ನ ಭದ್ರತೆ ಕಾಪಾಡುವುದರಿಂದ ಭಾರತವನ್ನು ತಡೆಯಲು ಸಾಧ್ಯವಿಲ್ಲ ಎಂದು ಹೇಳಿದೆ. ಅಮೆರಿಕದಿಂದ ಈ ಟೀಕೆ ಮಾಡಿರುವುದಕ್ಕೆ ವಿಷಾದಿಸಿದೆ.

ಸಿಂಧು ನದಿ ಜಲ ಒಪ್ಪಂದ ಕುರಿತ ಮಧ್ಯಸ್ಥಿಕೆ ನ್ಯಾಯಾಲಯದ ಇತ್ತೀಚಿನ ತೀರ್ಪನ್ನು ತಿರಸ್ಕರಿಸಿದ ಭಾರತ, ತನ್ನ ದೀರ್ಘಕಾಲದ ನಿಲುವನ್ನು ಪುನರುಚ್ಚರಿಸಿತು. ಮಧ್ಯಸ್ಥಿಕೆ ನ್ಯಾಯಾಲದ ಕಾನೂನುಬದ್ಧತೆ, ನ್ಯಾಯಸಮ್ಮತತೆ ಅಥವಾ ಸಾಮರ್ಥ್ಯವನ್ನು ಭಾರತ ಎಂದಿಗೂ ಒಪ್ಪಿಕೊಂಡಿಲ್ಲ. ಹೀಗಾಗಿ ಅದರ ಘೋಷಣೆಗಳು ನ್ಯಾಯ ವ್ಯಾಪ್ತಿಯಿಲ್ಲ. ಕಾನೂನು ಮಾನ್ಯತೆ ಇಲ್ಲ ಮತ್ತು ನೀರಿನ ಬಳಕೆಯ ಭಾರತದ ಹಕ್ಕುಗಳ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ಹೇಳಿದೆ.

## ಸೆ.8 ರಂದು ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ

• ಪ್ರಜೋದಯ ವರದಿ

**ಹಾಸನ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ ಸಂಯುಕ್ತಾಶ್ರಯದಲ್ಲಿ 2025-26ನೇ ಸಾಲಿನ ಹಾಸನ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಸೆ.08 ರಂದು ಹಾಸನ ಜಿಲ್ಲಾ ಕ್ರೀಡಾ ಸಂಕೀರ್ಣದಲ್ಲಿ ಆಯೋಜಿಸಲಾಗಿದೆ.

ಈ ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಈಗಾಗಲೇ ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟದ ವೈಯಕ್ತಿಕ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಮತ್ತು ದ್ವಿತೀಯ ಸ್ಥಾನ ಹಾಗೂ ಗುಂಪು ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದವರು ಜಿಲ್ಲಾ ಮಟ್ಟದಲ್ಲಿ ಭಾಗವಹಿಸಲು ಅರ್ಹರಿರುತ್ತಾರೆ.

ತಾಲ್ಲೂಕು ಮಟ್ಟದ ವಿಜೇತ ಕ್ರೀಡಾಪಟುಗಳು ಸೆ.8 ರಂದು ಕಡ್ಡಾಯವಾಗಿ ಬೆಳಿಗ್ಗೆ 8ಕ್ಕೆ ಹಾಸನ ಜಿಲ್ಲಾ ಕ್ರೀಡಾಂಗಣದಲ್ಲಿ ವರದಿ ಮಾಡಿಕೊಳ್ಳುವುದು ಎಂದು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ನುಗ್ಗೇಹಳ್ಳಿಯಲ್ಲಿ ವೈಭವದ ಗಣೇಶೋತ್ಸವ



• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ತಾಲ್ಲೂಕಿನ ನುಗ್ಗೇಹಳ್ಳಿ ಗ್ರಾಮದ ವೀರಶೈವ ಸಮಾಜದ ವತಿಯಿಂದ ಪೇಟೆ ಬೀದಿಯಲ್ಲಿರುವ ಶ್ರೀ ಬಸವೇಶ್ವರ ದೇವಾಲಯದಲ್ಲಿ ಪ್ರತಿಷ್ಠಾಪಿಸಲಾಗಿದ್ದ ಗೌರಿ ಗಣೇಶ ಮೂರ್ತಿಯನ್ನು ಗುರುವಾರ ಅದ್ದೂರಿ ಉತ್ಸವದೊಂದಿಗೆ ವಿಸರ್ಜಿಸಲಾಯಿತು.

ಗ್ರಾಮದ ಶ್ರೀ ಬಸವೇಶ್ವರ ದೇವಾಲಯದಲ್ಲಿ ಗೌರಿ- ಗಣೇಶ ಹಬ್ಬದಂದು ಪ್ರತಿಷ್ಠಾಪಿಸಲಾಗಿದ್ದ ಗೌರಿ ಗಣೇಶ ಮೂರ್ತಿಯನ್ನು ತೆರೆದ ವಾಹನದಲ್ಲಿ ಗ್ರಾಮದ ರಾಜಬೀದಿಗಳಲ್ಲಿ ಉತ್ಸವದೊಂದಿಗೆ ಪುರಾಣ ಪ್ರಸಿದ್ಧ ಪಂಚಮುಖಿ ಕಲ್ಯಾಣಿಯಲ್ಲಿ ವಿಸರ್ಜಿಸಲಾಯಿತು.

ವಿಸರ್ಜನಾ ಮಹೋತ್ಸವದ ಅಂಗವಾಗಿ ಭಕ್ತರಿಗೆ ವೀರಶೈವ ಸಮಾಜದ ವತಿಯಿಂದ ಪ್ರಸಾದ ವಿನಿಯೋಗ ನಡೆಯಿತು.ಉತ್ಸವದಲ್ಲಿ ಗ್ರಾಮದ ವೀರಶೈವ ಸೇವಾ ಸಮಿತಿ ಎಲ್ಲ ಪದಾಧಿಕಾರಿಗಳು ಹಾಗೂ ಗ್ರಾಮಸ್ಥರು ಪಾಲ್ಗೊಂಡಿದ್ದರು.

## ಕಾಫಿ ಉತ್ಪಾದನೆ ಏರಿಕೆ ಗುರಿ: ನಾಗಾಲ್ಯಾಂಡ್ ಪ್ರವಾಸ

• ಪ್ರಜೋದಯ ವರದಿ

**ಸಕಲೇಶಪುರ:** ಭಾರತದ ಕಾಫಿ ಉತ್ಪಾದನೆಯನ್ನು 7 ಲಕ್ಷ ಟನ್‌ಗೆ ಏರಿಸುವ ಗುರಿ ಸಾಧಿಸಲು ಹಲವಾರು ಪ್ರಯತ್ನಗಳು ನಡೆಯುತ್ತಿವೆ. ಆ ಭಾಗವಾಗಿ ನಾಗಾಲ್ಯಾಂಡ್ ಪ್ರವಾಸ ಹಮ್ಮಿಕೊಳ್ಳಲಾಗಿದೆಯೆಂದು ಕಾಫಿ ಮಂಡಳಿ ಸದಸ್ಯ ಎನ್.ಬಿ.ಉದಯ್ ಕುಮಾರ್ ಅವರು ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ಕಾಫಿ ಮಂಡಳಿಯು ಕಾಫಿ ಉದ್ಯಮದ ಶ್ರೇಯೋಭಿವೃದ್ಧಿಗಾಗಿ ಹಲವು ಯೋಜನೆ ರೂಪಿಸಿ, ಸೇವೆ-ಸೌಲಭ್ಯಗಳನ್ನು ಒದಗಿಸುವ ಮೂಲಕ ಬೆಳೆಗಾರರಿಗೆ ನೆರವಾಗುತ್ತಿದೆಯೆಂದರು.

ಪಶ್ಚಿಮ ಘಟ್ಟದ ಸಾಂಪ್ರದಾಯಿಕ ಪ್ರದೇಶಗಳ ಜೊತೆಗೆ ಅಸಾಂಪ್ರದಾಯಿಕ ಪ್ರದೇಶಗಳಲ್ಲಿಯೂ ಕಾಫಿ ಬೆಳೆ ವಿಸ್ತರಿಸುವ ಪ್ರಯತ್ನ ಕೈಗೆತ್ತಿಕೊಳ್ಳಲಾಗುತ್ತಿದ್ದು, ರೈತರಲ್ಲಿ ಜಾಗೃತಿ ಮೂಡಿಸುವ ಕಾರ್ಯ ನಡೆಯುತ್ತಿದೆ ಎಂದು ಹೇಳಿದರು.

ಕಾಫಿ ಮಂಡಳಿ ಅಧ್ಯಕ್ಷ ಎಂ.ಜೆ. ದಿನೇಶ್, ಸಿಇಒ ಡಾ. ಕೂರ್ಮರಾವ್ ಹಾಗು ಸದಸ್ಯರ ನಿಯೋಗ ಸೆ. 5ರ ಶುಕ್ರವಾರ ನಾಗಾಲ್ಯಾಂಡ್‌ಗೆ ತೆರಳಲಿದೆ. ನಾಗಾಲ್ಯಾಂಡ್ ಮುಖ್ಯಮಂತ್ರಿ, ಸಚಿವರು, ಅಲ್ಲಿನ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಲಿದ್ದು, ಜೊತೆಗೆ ಕಾಫಿ ಮಂಡಳಿ ಸಭೆಯಲ್ಲಿ ಭಾಗವಹಿಸಲಾಗುವುದು. ನಾಗಾಲ್ಯಾಂಡ್‌ನಲ್ಲಿ ಕಾಫಿ ಬೆಳೆಗೆ ಹೆಚ್ಚಿನ ಅವಕಾಶಗಳನ್ನು ಅನ್ವೇಷಿಸಲು ಅಲ್ಲಿನ ಸರ್ಕಾರದೊಂದಿಗೆ ಚರ್ಚಿಸಲಾಗುವುದೆಂದು ಉದಯ್‌ಕುಮಾರ್ ಅವರು ತಿಳಿಸಿದ್ದಾರೆ.

## ಸರ್ಕಾರದ ಸವಲತ್ತು ಸಮರ್ಪಕ ಬಳಕೆಗೆ ಕರೆ

• ಪ್ರಜೋದಯ ವರದಿ

**ಹೊಳೆನರಸೀಪುರ:** ಅಸಂಘಟಿತರು ಆರ್ಥಿಕ ಸದೃಢರಾಗಿ ಸಮಾಜದ ಮುಖ್ಯವಾಹಿನಿಗೆ ಬರುವಂತಾಗಲು ಸರ್ಕಾರದ ಸವಲತ್ತನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳಬೇಕಿದೆ ಎಂದು ಶಾಸಕ ಎಚ್.ಡಿ.ರೇವಣ್ಣ ಅವರು ತಿಳಿಸಿದರು.

ಪಟ್ಟಣದ ಸರ್ಕಾರಿ ಪದವಿ ಪೂರ್ವ ಬಾಲಕಿಯರ ಕಾಲೇಜಿನಲ್ಲಿ ಕಟ್ಟಡ ಕಾರ್ಮಿಕರಿಗೆ ವಿವಿಧ ಸಲಕರಣೆಗಳ ಕಿಟ್ ವಿತರಿಸಿ ಮಾತನಾಡಿದ ಅವರು, ಕಟುಂಬಕ್ಕೆ ಆಧಾರವಾಗಿ ದುಡಿಯುವ ಕಾರ್ಮಿಕನ ಕಲ್ಯಾಣ ಬಯಸಿ ಸರಕಾರಗಳು ಮಹತ್ವದ ಯೋಜನೆಗಳನ್ನು ಜಾರಿಗೆ ತಂದಿರುತ್ತದೆ. ಕಾರ್ಮಿಕರ ವಿಮೆ, ಕೂಲಿ



ಕಾರ್ಮಿಕರ ಸಹಾಯ ಧನ, ವಾಹನ ಚಾಲಕರು ಹಾಗೂ ಸಮಾಜದ ಎಲ್ಲ ಶ್ರಮಿಕರಿಗೆ ಒಂದಲ್ಲೊಂದು ಯೋಜನೆಗಳು ಇರುತ್ತದೆ. ಇದು ಆಯಾ ಕಾರ್ಮಿಕರ ಸಬಲೀಕರಣಕ್ಕಾಗಿಯೇ ಅನುಷ್ಠಾನ ಪಡಿಸಲಾಗಿರುತ್ತದೆ ಎಂದು ತಿಳಿಸಿದರು.

ಕಟ್ಟಡ ಕಾರ್ಮಿಕರು ಇಲಾಖೆಯ ಕಚೇರಿಗಳಿಗೆ ತೆರಳಿ ನೊಂದಾಯಿಸಿಕೊಳ್ಳಬೇಕು. ಪ್ರತಿ ವರ್ಷ ನವೀಕರಣ ಸಹ ಮಾಡಿಸಿಕೊಳ್ಳಬೇಕು. ಈ ಮೂಲಕ ಮಕ್ಕಳ ವಿವಾಹ, ವಿದ್ಯಾಭ್ಯಾಸ, ಅಪಘಾತ ವಿಮೆ ಸೌಲಭ್ಯಗಳು ದೊರೆಯುತ್ತದೆ. ಸಮಾಜದಲ್ಲಿ ಅವರ ವೃತ್ತಿಗಳು ಆಯಾ ಸ್ಥರಗಳಲ್ಲಿ ಪ್ರಾಧಾನ್ಯತೆ ಹೊಂದಿರುತ್ತದೆ. ಇದರಿಂದ ಶ್ರಮಿಕ ವರ್ಗದ ಪರವಾಗಿ ಯೋಜನೆಗಳನ್ನು ರೂಪಿಸಲಾಗಿರುತ್ತದೆ. ಪ್ರಸ್ತುತ ಕಟ್ಟಡ ಕಾರ್ಮಿಕರಿಗೆ 70 ಕಿಟ್‌ಗಳನ್ನು ವಿತರಿಸಲಾಗುತ್ತಿದೆ. ಉಳಿದಂತೆ ಬಡಗಿ, ಎಲೆಕ್ಟ್ರಿಕ್ ಕೆಲಸದ ಅನುಕೂಲತೆಗಾಗಿ ಕಿಟ್‌ಗಳನ್ನು ವಿತರಿಸಲಾಗುವುದು ಎಂದು ತಿಳಿಸಿದರು.

ಪ್ರೌಢಶಾಲಾ ಮುಖ್ಯ ಶಿಕ್ಷಕ ಕಾಳೇಗೌಡ, ಡಾ.ಬಿ.ಆರ್.ಅಂಬೇಡ್ಕರ್ ಕಟ್ಟಡ ಕಾರ್ಮಿಕರ ಸಂಘದ ಆಧ್ಯಕ್ಷ ಕೃಷ್ಣಪ್ಪ ಹಾಜರಿದ್ದರು.

## ಸೆ. 7 ರಂದು ಮೈಸೂರಿನಲ್ಲಿ ಚಿಂತನ -ಮಂಥನ

• ಪ್ರಜೋದಯ ವರದಿ

ಹಾಸನ: ಭಗೀರಥ ಶೈಕ್ಷಣಿಕ ಮತ್ತು ಚಾರಿಟಬಲ್ ಟ್ರಸ್ಟ್ ವತಿಯಿಂದ ಸೆ. 7ರ ಭಾನುವಾರ ಮೈಸೂರಿನಲ್ಲಿ ಚಿಂತನ ಮಂಥನ ಸಭೆ ನಡೆಯಲಿದೆಯೆಂದು ಭಗೀರಥ ಶೈಕ್ಷಣಿಕ ಮತ್ತು ಚಾರಿಟಬಲ್ ಟ್ರಸ್ಟ್ ಸದಸ್ಯ, ಹಾಸನ ಜಿಲ್ಲಾ ಸಂಯೋಜಕ ಹೊಯ್ಸಳ ಕೊಣನೂರು ಅವರು ತಿಳಿಸಿದ್ದಾರೆ.

ಸೆ.7 ರಂದು ಮೈಸೂರಿನ ಸರಸ್ವತಿಪುರಂನಲ್ಲಿರುವ ಉಪ್ಪಾರ ವಿದ್ಯಾರ್ಥಿ ನಿಲಯದಲ್ಲಿ ಮ್ಯಾನೇಜಿಂಗ್ ಟ್ರಸ್ಟಿ ಪಿ. ಶಿವಶಂಕರ್ ಅಧ್ಯಕ್ಷತೆಯಲ್ಲಿ ಬೆಳಿಗ್ಗೆ 11 ಗಂಟೆಗೆ ಚಿಂತನ ಮಂಥನ ಸಭೆ ಹಾಗು ಮಧ್ಯಾಹ್ನ 2 ಗಂಟೆಗೆ ಟ್ರಸ್ಟಿನ ಸರ್ವ ಸದಸ್ಯರ ಸಭೆ ನಡೆಯಲಿದೆ. ಈ ಸಭೆಗೆ ಭಾಂದವರು ಭಾಗವಹಿಸಿ ಸಮಾಜದ ಏಳಿಗೆಯ ಕುರಿತ ಚಿಂತನ ಮಂಥನ ಸಭೆಯಲ್ಲಿ ಭಾಗವಹಿಸಬೇಕೆಂದು ಕೋರಿದ್ದಾರೆ.

ಭಗೀರಥ ಶೈಕ್ಷಣಿಕ ಮತ್ತು ಚಾರಿಟಬಲ್ ಟ್ರಸ್ಟ್ ಉಪ್ಪಾರ ಸಮಾಜದ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಮತ್ತು ಔದ್ಯೋಗಿಕ ಏಳಿಗೆಗೆ ಕಂಕಣಬದ್ದವಾಗಿದ್ದು ಸಮಾಜದ ಪ್ರತಿಭಾವಂತ ಬಡ ವಿದ್ಯಾರ್ಥಿಗಳಿಗೆ ಆರ್ಥಿಕ ನೆರವನ್ನು ನೀಡುತ್ತಾ ಬಂದಿದೆ. 2024-25ನೇ ಸಾಲಿನಲ್ಲಿ ವೈದ್ಯಕೀಯ, ಇಂಜಿನಿಯರಿಂಗ್, ಆಯುರ್ವೇದಿಕ್, ಕೃಷಿ, ತೋಟಗಾರಿಕೆ, ಬಿ ಫಾರ್ಮಾ, ಪ್ಯಾರಾಮೆಡಿಕಲ್, ಬಿಇಡಿ, ಕಾನೂನು, ಸ್ನಾತಕೋತ್ತರ ಕೋರ್ಸ್‌ಗಳನ್ನು ವ್ಯಾಸಂಗ ಮಾಡುತ್ತಿರುವ ರಾಜ್ಯದ 4 ವಿವಿಧ ಜಿಲ್ಲೆಗಳಿಗೆ ಸೇರಿದ 128 ಪ್ರತಿಭಾವಂತ ಬಡ ವಿದ್ಯಾರ್ಥಿಗಳಿಗೆ ಸುಮಾರು 23 ಲಕ್ಷ ರೂ. ಆರ್ಥಿಕ ನೆರವನ್ನು ನೀಡಲಾಗಿದೆ. ಮಾಹಿತಿಗೆ ಮೊ.ಸಂ. 9844590624 ಸಂಪರ್ಕಿಸಲು ಕೋರಲಾಗಿದೆ.

## ಸೌಲಭ್ಯ ಪಡೆಯಲು ಬೆಳೆ ಸಮೀಕ್ಷೆ ಕಡ್ಡಾಯ

• ಪ್ರಜೋದಯ ವರದಿ

**ಅರೇಹಳ್ಳಿ:** ಬೆಳೆ ವಿಮೆ, ಕನಿಷ್ಠ ಬೆಂಬಲ ಬೆಲೆ, ಬ್ಯಾಂಕ್ ಸಾಲ, ಅತಿವೃಷ್ಟಿ-ಅನಾವೃಷ್ಟಿಯ ಹಾನಿ ಪರಿಹಾರ ಹಾಗು ಸರ್ಕಾರದಿಂದ ದೊರೆಯುವ ಇತರೆ ಸವಲತ್ತುಗಳನ್ನು ಪಡೆಯಲು ಬೆಳೆ ಸಮೀಕ್ಷೆ ಕಡ್ಡಾಯವಾಗಿದೆ ಎಂದು ಉಪ ತಹಶೀಲ್ದಾರ್ ಕೆ.ಜಿ. ಪ್ರದೀಪ್ ಅವರು ತಿಳಿಸಿದರು.

ನಾಡಕಚೇರಿಯಲ್ಲಿ ಆಯೋಜಿಸಿದ್ದ ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರತಿಯೊಬ್ಬ ರೈತರು ತಮ್ಮ ಭೂಮಿಯಲ್ಲಿ ಬೆಳೆದ ಬೆಳೆ, ಬಿತ್ತನೆ ಹಾಗು ನೀರಾವರಿ ಸಂಬಂಧಿತ ಮಾಹಿತಿಯನ್ನು ಬೆಳೆ ಸಮೀಕ್ಷೆ ಆ್ಯಪ್ ಮೂಲಕ ಸಂಗ್ರಹಿಸಲಾಗುತ್ತಿದೆ. ಈ ಆಧಾರದ ಮೇಲೆ ರೈತರಿಗೆ ವಿವಿಧ ಸೌಲಭ್ಯಗಳು ದೊರೆಯಲಿದೆ ಎಂದರು.



ಈಗಾಗಲೇ ಆ್ಯಪ್ ಮೂಲಕ ರೈತರು ಸ್ವತಃ ಸಮೀಕ್ಷೆ ಮಾಡಿಕೊಳ್ಳುವ ವ್ಯವಸ್ಥೆ ಇದ್ದರೂ, ಹೆಚ್ಚಿನ ಕೃಷಿಕರು ಮೊಬೈಲ್ ಬಳಕೆಯ ಜ್ಞಾನ ಕೊರತೆಯಿಂದ ಸಮೀಕ್ಷೆ ನಡೆಸಿಲ್ಲ. ಕೆಲವರು ಸಮೀಕ್ಷೆಮಾಡಿದರೂ ಮಾಹಿತಿಯನ್ನು ನಿಖರವಾಗಿ ದಾಖಲಿಸುವಲ್ಲಿ ವಿಫಲರಾಗಿದ್ದಾರೆ. ಹೀಗಾಗಿ ತಹಶೀಲ್ದಾರ್ ಮಾರ್ಗದರ್ಶನದಲ್ಲಿ ಅರೇಹಳ್ಳಿ ಹೋಬಳಿ ವ್ಯಾಪ್ತಿಯ 88 ಗ್ರಾಮಗಳಿಗೆ 35 ಗ್ರಾಮ ಸೇವಕರು ಹಾಗು ಪಿ.ಆರ್‌ಗಳನ್ನು ನಿಯೋಜಿಸಲಾಗಿದ್ದು, ಕಾರ್ಯಾರಂಭವಾಗಿದೆ ಎಂದರು.

ಅರೇಹಳ್ಳಿ ಭಾಗದ ಕಾಡಾನೆ ಹಾವಳಿ ಹೆಚ್ಚಿರುವ ಪ್ರದೇಶಗಳಲ್ಲಿ ಸಮೀಕ್ಷೆ ಯಶಸ್ವಿಯಾಗಲು ರೈತರು ಸಹಕಾರ ನೀಡಬೇಕು. ವಿಶೇಷವಾಗಿ ಮಿಶ್ರ ಬೆಳೆಗಳ ವಿವರವನ್ನು ನಿಖರವಾಗಿ ಒದಗಿಸಿದಲ್ಲಿ, ರೈತರಿಗೆ ಹೆಚ್ಚಿನ ಸೌಲಭ್ಯ ದೊರೆಯುತ್ತದೆ. ಆದ್ದರಿಂದ ಸಮೀಕ್ಷೆಗಾರರೊಂದಿಗೆ ಕೈಜೋಡಿಸಿ ಬೆಳೆ ಸಮೀಕ್ಷೆ ಕಾರ್ಯವನ್ನು ಯಶಸ್ವಿಗೊಳಿಸಲು ರೈತರು ಮುಂದಾಗಬೇಕೆಂದು ಮನವಿ ಮಾಡಿದರು.

## ಎಲ್ಲ ಮಾದರಿಯ ಕ್ರಿಕೆಟ್‌ಗೆ ಅಮಿತ್ ಮಿಶ್ರಾ ವಿದಾಯ

• ಪ್ರಜೋದಯ ವರದಿ

**ನವದೆಹಲಿ:** ಐಪಿಎಲ್ ಇತಿಹಾಸದಲ್ಲಿ ಅತ್ಯಂತ ಪ್ರಸಿದ್ಧ ಹೆಸರುಗಳಲ್ಲಿ ಒಬ್ಬರಾದ ಭಾರತದ ಅನುಭವಿ ಲೆಗ್ ಸ್ಪಿನ್ನರ್ ಅಮಿತ್ ಮಿಶ್ರಾ ಅವರು ಎಲ್ಲ ಮಾದರಿಯ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿದ್ದಾರೆ. ಈ ಮೂಲಕ ಅಂತರರಾಷ್ಟ್ರೀಯ, ದೇಶೀಯ ಮತ್ತು ಫ್ರಾಂಚೈಸಿ ಕ್ರಿಕೆಟ್ ಆಡಿರುವ ತಮ್ಮ 25 ವರ್ಷಗಳ ವೃತ್ತಿಜೀವನವನ್ನು ಕೊನೆಗೊಳಿಸಿದ್ದಾರೆ.

42 ವರ್ಷದ ಮಿಶ್ರಾ ಅವರು ಭಾರತ ಪರ 22 ಟೆಸ್ಟ್, 36 ಏಕದಿನ ಮತ್ತು 10 ಟಿ-20 ಪಂದ್ಯಗಳನ್ನು ಆಡಿದ್ದು, 156 ಅಂತರರಾಷ್ಟ್ರೀಯ ವಿಕೆಟ್‌ಗಳನ್ನು ಕಬಳಿಸಿದ್ದಾರೆ. ತಮ್ಮ ಚಾತುರ್ಯ ಮತ್ತು ವಿಭಿನ್ನತೆಗೆ ಹೆಸರುವಾಸಿಯಾದ ಮಿಶ್ರಾ ಅವರು, 2013ರಲ್ಲಿ ಜಿಂಬಾಬ್ವೆ ವಿರುದ್ಧದ ಐದು ಪಂದ್ಯಗಳ ಏಕದಿನ ಸರಣಿಯಲ್ಲಿ 18 ವಿಕೆಟ್‌ಗಳನ್ನು ಪಡೆಯುವ ಮೂಲಕ ಜಾವಗಲ್ ಶ್ರೀನಾಥ್ ಅವರ ದಾಖಲೆಯನ್ನು ಸರಿಗಟ್ಟಿದ್ದರು. 2014ರ ಟಿ-20 ವಿಶ್ವಕಪ್‌ನಲ್ಲಿಯೂ ಸಹ ಅವರು ಪ್ರಮುಖ ಪಾತ್ರ ವಹಿಸಿ ಭಾರತ ಫೈನಲ್ ತಲುಪಲು ಸಹಾಯ ಮಾಡಿದರು.

ಐಪಿಎಲ್‌ನಲ್ಲಿ ಮಿಶ್ರಾ ಅವರು ಆಡಿರುವ 162 ಪಂದ್ಯಗಳಲ್ಲಿ, 7.37ರ ಎಕಾನಮಿ ದರದಲ್ಲಿ 174 ವಿಕೆಟ್‌ಗಳನ್ನು ಕಬಳಿಸಿದ್ದಾರೆ. ಈ ಮೂಲಕ ಟೂರ್ನಮೆಂಟ್ ಇತಿಹಾಸದಲ್ಲಿ ಏಳನೇ ಅತಿ ಹೆಚ್ಚು ವಿಕೆಟ್ ಪಡೆದ ಬೌಲರ್ ಆಗಿದ್ದಾರೆ. 2008 ರಲ್ಲಿ ಡೆಲ್ಲಿ ಡೇರ್‌ಡೆವಿಲ್ಸ್, 2011 ರಲ್ಲಿ ಪಂಜಾಬ್ ಮತ್ತು 2013 ರಲ್ಲಿ ಸನ್‌ರೈಸರ್ಸ್ ಹೈದರಾಬಾದ್ ಪರ ಮೂರು ಐಪಿಎಲ್ ಹ್ಯಾಟ್ರಿಕ್ ವಿಕೆಟ್ ಪಡೆದ ಏಕೈಕ ಬೌಲರ್ ಆಗಿದ್ದಾರೆ. ಈ ದಾಖಲೆ ಇನ್ನೂ ಅವರ ಹೆಸರಿಗೆ



ಇದ್ದು, ಐಪಿಎಲ್ ಇತಿಹಾಸದಲ್ಲಿ ಅವರ ವಿಶಿಷ್ಟ ಸಾಧನೆಯನ್ನು ಎತ್ತಿ ತೋರಿಸುತ್ತದೆ.

ನನ್ನ ಕ್ರಿಕೆಟ್ ಜೀವನದ ಈ 25 ವರ್ಷಗಳು ಸ್ಮರಣೀಯ. ಇಷ್ಟು ದಿನ ನನ್ನೊಂದಿಗಿದ್ದ ಬಿಸಿಸಿಐ, ಆಡಳಿತ, ಹರಿಯಾಣ ಕ್ರಿಕೆಟ್ ಸಂಸ್ಥೆ, ಸಹಾಯಕ ಸಿಬ್ಬಂದಿ, ನನ್ನ ಸಹೋದ್ಯೋಗಿಗಳು ಮತ್ತು ನನ್ನ ಕುಟುಂಬ ಸದಸ್ಯರಿಗೆ ನಾನು ತುಂಬಾ ಕೃತಜ್ಞನಾಗಿದ್ದೇನೆ ಎಂದು ಮಿಶ್ರಾ ಎಕ್ಸ್‌ನಲ್ಲಿನ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ನಾನು ಆಡಿದಾಗಲೆಲ್ಲ ಮತ್ತು ಎಲ್ಲೇ ಆಡಿದರೂ ನನ್ನ ಪ್ರಯಾಣವನ್ನು ಸ್ಮರಣೀಯವಾಗಿಸಿದ ಅಭಿಮಾನಿಗಳ ಪ್ರೀತಿ ಮತ್ತು ಬೆಂಬಲಕ್ಕೆ ನಾನು ಧನ್ಯವಾದ ಹೇಳಲು ಬಯಸುತ್ತೇನೆ. ಕ್ರಿಕೆಟ್ ನನಗೆ ಅಸಂಖ್ಯಾತ ನೆನಪುಗಳು ಮತ್ತು ಅಮೂಲ್ಯವಾದ ಕಲಿಕೆಗಳನ್ನು ನೀಡಿದೆ ಮತ್ತು ಮೈದಾನದಲ್ಲಿನ ಪ್ರತಿ ಕ್ಷಣವೂ ನಾನು ಜೀವನಪರ್ಯಂತ ಅಮೂಲ್ಯವಾಗಿ ನೆನಪಿಸಿಕೊಳ್ಳುವ ಸ್ಮರಣೆಯಾಗಿದೆ' ಎಂದು ಮಿಶ್ರಾ ತಿಳಿಸಿದ್ದಾರೆ.

## ಸಚಿವರ ಸಮಯ ಕೋರಿದ ಶಾಸಕ

• ಪ್ರಜೋದಯ ವರದಿ

**ಸಕಲೇಶಪುರ:** ಸಮೀಪದ ಮಳಲಿ ಗ್ರಾಮದಲ್ಲಿ ನಿರ್ಮಾಣವಾಗಿರುವ ತ್ಯಾಜ್ಯ ವಿಲೇವಾರಿ ಘಟಕ ಉದ್ಘಾಟನೆಗೆ ಸಮಯ ನೀಡುವಂತೆ ಶಾಸಕ ಸಿಮೆಂಟ್ ಮಂಜು ಅವರು ಗುರುವಾರ ಪೌರಾಡಳಿತ ಸಚಿವ ರಹೀಮ್ ಖಾನ್ ಅವರನ್ನು ಭೇಟಿಯಾಗಿ ಮನವಿ ಮಾಡಿದರು.

ಬೆಂಗಳೂರಿನ ವಿಧಾನಸೌಧದಲ್ಲಿ ಮನವಿ ಸಲ್ಲಿಸಿದ ಅವರು, ಪಟ್ಟಣಕ್ಕೆ ಸಮೀಪದಲ್ಲಿರುವ ಮಳಲಿ ಗ್ರಾಮದಲ್ಲಿ ಪುರಸಭೆಯ ಘನತ್ಯಾಜ್ಯ ವಿಲೇವಾರಿ ಘಟಕದ ಕಾಮಗಾರಿ ಬಹುತೇಕ ಮುಗಿದಿದೆ. ತಾವು ಉದ್ಘಾಟನೆಗೆ ಸಮಯ ನೀಡಿದರೆ ಕಾರ್ಯಕ್ರಮಕ್ಕೆ ಸಿದ್ಧತೆ ಮಾಡಿಕೊಳ್ಳಲಾಗುವುದು. ಪಟ್ಟಣದ ಜಾತ್ರ ಮೈದಾನದಲ್ಲಿ ಸಾವಿರಾರು ಟನ್ ಪುರಸಭೆಯ ತ್ಯಾಜ್ಯವಿದ್ದು ಅದನ್ನು ಸಹ ಪುರಸಭೆ ವತಿಯಿಂದ ವಿಲೇವಾರಿ ಮಾಡಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದರು.

## ಸಭೆ ಮುಂದೂಡಿಕೆ

• ಪ್ರಜೋದಯ ವರದಿ

**ಹೊಳೆನರಸೀಪುರ:** ಪಟ್ಟಣದ ತಾಲ್ಲೂಕು ಕಚೇರಿಯಲ್ಲಿ ಸೆ.6 ರಂದು ನಡೆಯಬೇಕಿದ್ದ ತಾಲೂಕು ಮಟ್ಟದ ಕುಂದುಕೊರತೆ ಸಭೆಯನ್ನು ಸೆ.8 ರ ಸೋಮವಾರಕ್ಕೆ ಮುಂದೂಡಿರುವುದಾಗಿ ತಹಸೀಲ್ದಾರ್ ವೈ.ಎಂ. ರೇಣುಕುಮಾರ್ ತಿಳಿಸಿದ್ದಾರೆ.

ಪ್ರಕಟಣೆಗೆ ಕೋರಿರುವ ಅವರು, ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ತಾಲ್ಲೂಕು ಮಟ್ಟದ ಜನಸ್ಪಂದನ ಮುಂದೂಡಲಾಗಿದೆ. ಸೆ.6 ರಂದು ಹಾಸನ ಜಿಲ್ಲಾ ಮಟ್ಟದಲ್ಲಿ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ನೇತೃತ್ವದಲ್ಲಿ ಜನಸ್ಪಂದನ ಕಾರ್ಯ ನಡೆಯಲಿದೆ. ಈ ಸಂದರ್ಭ ತಾಲೂಕು ತಹಸೀಲ್ದಾರ್‌ಗಳು ಹಾಜರಿರಬೇಕಿದೆ. ಆದ್ದರಿಂದ ಸೆ.8ಕ್ಕೆ ತಾಲ್ಲೂಕು ಮಟ್ಟದಲ್ಲಿ ನಡೆಸಲಾಗುವುದು. ನಾಗರೀಕರು ಸಹಕರಿಸುವಂತೆ ಕೋರಿದ್ದಾರೆ.

## ಅಸಾಧಾರಣ ಸಾಧನೆಗೈದ ಮಕ್ಕಳಿಗೆ ಜಿಲ್ಲಾ ಮಟ್ಟದ ಪ್ರಶಸ್ತಿ

• ಪ್ರಜೋದಯ ವರದಿ

**ಹಾಸನ:** ಅಸಾಧಾರಣ ಸಾಧನೆ ಮಾಡಿದ ಮಕ್ಕಳಿಗೆ ಜಿಲ್ಲಾ ಮಟ್ಟದ ಪ್ರಶಸ್ತಿ ಕುರಿತು ಆಯ್ಕೆ ಸಮಿತಿಯ ನಿರ್ಧಾರದ ಪ್ರಕಾರ ಮಾನ್ಯತೆಗೆ ಯೋಗ್ಯವಾದ ಸಾಧನೆಯನ್ನು ಮಾಡಿರುವಂತಹ 5 ರಿಂದ 18 ವರ್ಷದೊಳಗಿನ ಮಕ್ಕಳನ್ನು ಆಯ್ಕೆ ಮಾಡಲಾಗುವುದು. ಜಿಲ್ಲಾ ಮಟ್ಟದ ಪ್ರಶಸ್ತಿಯು 10000 ರೂ.ಗಳ ನಗದು ಹಾಗೂ ಪ್ರಶಸ್ತಿ ಪತ್ರ ಒಳಗೊಂಡಿರುತ್ತದೆ.

ಈಗಾಗಲೆ ಹಿಂದಿನ ವರ್ಷಗಳಲ್ಲಿ ಆಯ್ಕೆಯಾಗಿರುವ ಮಕ್ಕಳನ್ನು ಹೊರತುಪಡಿಸಿ, ಪ್ರಶಸ್ತಿಗೆ ಆಯ್ಕೆ ಯಾಗುವಂತಹ ಮಕ್ಕಳು ಅಪ್ರತಿಮ ಪ್ರತಿಭೆಯುಳ್ಳವರಾಗಿರತಕ್ಕದ್ದು, ಅಸಾಧಾರಣ ಸಾಧನೆಯನ್ನು ಮಾಡಿರುವಂತಹ 4 ಕ್ಷೇತ್ರಗಳಿಂದ 8 ಮಕ್ಕಳನ್ನು ಆಯ್ಕೆ ಮಾಡಲು ಅವಕಾಶವಿದ್ದು, ಸದರಿ ಪ್ರಶಸ್ತಿಗಳಿಗೆ ಪೂರಕ



ದಾಖಲಾತಿಗಳನ್ನು ಒದಗಿಸುವುದು. ಮಕ್ಕಳ ವಯಸ್ಸಿನ ಪ್ರಮಾಣ ಪತ್ರವನ್ನು ಅಧಿಕಾರಿಗಳಿಂದ ದೃಢೀಕರಿಸಿ ಸಲ್ಲಿಸಬೇಕು.

2025-26ನೇ ವರ್ಷದ ಪ್ರಶಸ್ತಿಗೆ ನಿಗದಿಪಡಿಸಿದ ಅರ್ಜಿ ನಮೂನೆಗಳನ್ನು ಸಂಬಂಧಿಸಿದ ಜಿಲ್ಲೆಯ ಉಪ ನಿರ್ದೇಶಕರ ಕಛೇರಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾಸನ ಇಲ್ಲಿಂದ ಪಡೆದು, ದ್ವಿಪ್ರತಿಯಲ್ಲಿ ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ:29.09.2025ರ ಒಳಗೆ ತಲುಪುವಂತೆ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾಸನ ಈ ಕಛೇರಿಗೆ ಸಲ್ಲಿಸತಕ್ಕದ್ದು, ನಿಗದಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ದೂ.ಸಂ.: 08172 267218ನ್ನು ಸಂಪರ್ಕಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.


## ಜಿಲ್ಲಾ ಮಟ್ಟದ ಅತ್ಯುತ್ತಮ ಪ್ರಶಸ್ತಿಗೆ ಶಿಕ್ಷಕಕರ ಆಯ್ಕೆ

• ಪ್ರಜೋದಯ ವರದಿ

**ಹಾಸನ:** ಶಾಲಾ ಶಿಕ್ಷಣ ಇಲಾಖೆ ವತಿಯಿಂದ 2025-26ನೇ ಸಾಲಿನ ಶಿಕ್ಷಕರ ದಿನಾಚರಣೆಯ ದಿನ ಸನ್ಮಾನಕ್ಕಾಗಿ ಜಿಲ್ಲಾ ಅತ್ಯತ್ತಮ ಶಿಕ್ಷಕ ಪ್ರಶಸ್ತಿಗೆ 3 ವಿಭಾಗದಲ್ಲಿ ಜಿಲ್ಲೆಯ ಎಲ್ಲಾ ತಾಲ್ಲೂಕಿನಲ್ಲಿ ಶಿಕ್ಷಕರನ್ನು ಆಯ್ಕೆ ಮಾಡಲಾಗಿದೆ.

**ಕಿರಿಯ ಪ್ರಾಥಮಿಕ ವಿಭಾಗ:** ಆಲೂರು ತಾಲ್ಲೂಕಿನ ಬ್ಯಾಬ ಶಾಲೆಯ ಶಿಕ್ಷಕ ಹೆಚ್.ಎಲ್.ಚಂದ್ರಕುಮಾರ, ಅರಕಲಗೂಡು ತಾಲ್ಲೂಕಿನ ಸೀಬಹಳ್ಳಿ ಶಾಲೆಯ ಡಿ.ಆರ್. ಮಧುಸೂಧನ, ಅರಸೀಕೆರೆ ತಾಲ್ಲೂಕಿನ ಜನ್ನಾವರ ಶಾಲೆಯ ಜಿ.ಬಿ.ನಟರಾಜ, ಬೇಲೂರು ತಾಲ್ಲೂಕಿನ ನಿಟ್ಟೂರು ಶಾಲೆಯ ಬಿ.ಎನ್. ಹೊನ್ನರಾಜು, ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಭಕ್ತರಹಳ್ಳಿ ಶಾಲೆಯ ಎನ್.ಎಂ. ನಾಗಜ್ಯೋತಿ, ಹಾಸನ ತಾಲ್ಲೂಕಿನಲ್ಲಿ ಕಂಡಿಪುರ ಶಾಲೆಯ ಕೆ.ಜಿ.ನಾಗರತ್ನ, ಹೊಳೆನರಸೀಪುರ ತಾಲ್ಲೂಕಿನ ವಡ್ಡರಪಾಳ್ಯ ಶಾಲೆಯ ಪಿ. ಸಿದ್ದಲಿಂಗಮ್ಮ ಹಾಗೂ ಸಕಲೇಶಪುರ ತಾಲ್ಲೂಕಿನ ಹಾಡ್ಯ ಶಾಲೆಯ ಜಿ. ಆರ್.ಸತೀಶ.

**ಹಿರಿಯ ಪ್ರಾಥಮಿಕ ವಿಭಾಗ:** ಆಲೂರು ತಾಲ್ಲೂಕಿನ ಬೈರಾಪುರ ಶಾಲೆಯ ಶಿಕ್ಷಕರಾದ ಎಂ.ಎಲ್. ಎಲಿಜಬೆತ್, ಅರಕಲಗೂಡು ತಾಲ್ಲೂಕಿನ ಮುತ್ತಿಗೆ ಶಾಲೆಯ ಅಮ್ರಿನ್ ಸಲ್ಮಾ, ಅರಸೀಕೆರೆ ತಾಲ್ಲೂಕಿನ ಹೆಗ್ಗಟ್ಟ ಶಾಲೆಯ ಗಾಯಿತ್ರಿ, ಬೇಲೂರು ತಾಲ್ಲೂಕಿನ ಹಳೇಬಿಡು ಶಾಲೆಯ ಜಿ.ಪಿ. ಕಲಾವತಿ, ಚನ್ನರಾಯಪಟ್ಟಣ ತಾಲ್ಲೂಕಿನ ಹಿರೀಸಾವೆ ಶಾಲೆಯ ಎನ್.ಜಿ.ಶೋಭ, ಹಾಸನ ತಾಲ್ಲೂಕಿನ ಮಡೆನೂರು ಶಾಲೆಯ ಜೆ.ಆರ್.



ಮಂಜುನಾಥ, ಹೊಳೆನರಸೀಪುರ ತಾಲ್ಲೂಕಿನ ಗುಂಜೇವು ಶಾಲೆಯ ಜಿ. ಆರ್.ಆನಂದ ಹಾಗೂ ಸಕಲೇಶಪುರ ತಾಲ್ಲೂಕಿನ ಕೆಂದನ ಮನೆ ಶಾಲೆಯ ಗೌಡೇಗೌಡ.

**ಪ್ರೌಢಶಾಲೆ ವಿಭಾಗ:** ಆಲೂರು ತಾಲ್ಲೂಕಿನ ಪ್ರೌಢಶಾಲೆ ಕೆ.ಹೊಸಕೋಟೆ ಮುತ್ತಿಗೆ ಶಾಲೆಯ ಶಿಕ್ಷಕ ಬಿ.ಇ.ಚನ್ನವೀರಯ್ಯ, ಅರಕಲಗೂಡು ತಾಲ್ಲೂಕಿನ ಕೋಟೆ ಶಾಲೆಯ ಎ.ಪಿ.ವಿವೇಕಾನಂದ, ಅರಸೀಕೆರೆ ತಾಲ್ಲೂಕಿನ ಕೋಳಗುಂದ ಶಾಲೆಯ ಬಿ.ಆರ್.ಪ್ರಸನ್ನಕುಮಾರ್, ಬೇಲೂರು ತಾಲ್ಲೂಕಿನ ಹಳೇಬೀಡು ಶಾಲೆಯ ಮೋಹನ್‌ರಾಜ್, ಚನ್ನರಾಯಪಟ್ಟಣ ತಾಲ್ಲೂಕಿನ ಉದಯಪುರ ಶಾಲೆಯ ಎಂ.ಎಸ್.ಸುರೇಶ್, ಹಾಸನ ತಾಲ್ಲೂಕಿನಲ್ಲಿ ಬಾ.ಸ.ಪ.ಪೂ. ಕಾಲೇಜು ಪ್ರೌ.ವಿ ಪ್ರಧಾನ ಶಿಕ್ಷಕರಾದ ಚಿದಾನಂದ ಕೆ.ಎನ್, ಹೊಳೆನರಸೀಪುರ ತಾಲ್ಲೂಕಿನ ಬೇಡಿಗನಹಳ್ಳಿ ಶಾಲೆಯ ಎನ್.ಬಿ.ಪ್ರಸನ್ನಕುಮಾರ್, ಸಕಲೇಶಪುರ ತಾಲ್ಲೂಕಿನ ಉಚ್ಚಂಗಿ ಶಾಲೆಯ ಶಿಕ್ಷಕ ಪಿ.ಆರ್. ಜಗದೀಶ ಅವರು ಆಯ್ಕೆ ಆಗಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಬಲರಾಮ ಅವರು ತಿಳಿಸಿದ್ದಾರೆ.

### ಇನ್‌ಸ್ಪೈರ್ ಅಂತಾರಾಷ್ಟ್ರೀಯ ಶಾಲೆಯಲ್ಲಿ ಚುನಾಯಿತ ವಿದ್ಯಾರ್ಥಿ ಪ್ರತಿನಿಧಿಗಳ ಮಕ್ಕಳ ಸಂಸತ್ತು

## ಪಠ್ಯೇತರ ಚಟುವಟಿಕೆಗಳಲ್ಲೂ ಮಕ್ಕಳು ಭಾಗಿಯಾಗಲಿ

• ಪ್ರಜೋದಯ ವರದಿ

**ಆಲೂರು:** ಕಲಿಕೆ ನಾಲ್ಕು ಗೋಡೆಗಳೊಳಗೆ ಸೀಮಿತವಾಗದೇ ಸಾಮುದಾಯಿಕವಾಗಿ ವಿಸ್ತರಣೆಯಾಗಬೇಕಾದರೆ ಪಠ್ಯದಷ್ಟೇ ಪಠ್ಯೇತರ ಚಟುವಟಿಕೆಗಳಲ್ಲೂ ಮಗು ಕ್ರಿಯಾಶೀಲವಾಗಿ ತೊಡಗಿಕೊಳ್ಳಬೇಕು. ಈ ನಿಟ್ಟಿನಲ್ಲಿ ಮಕ್ಕಳ ಸರ್ವತೋಮುಖ ಬೆಳವಣಿಗೆಯಲ್ಲಿ ಮಗ್ಗೆ- ಕಾರಗೋಡು ಇನ್‌ಸ್ಪೈರ್ ಇಂಟರ್ ನ್ಯಾಷನಲ್ ಶಾಲೆಯ ಪಾತ್ರ ಮಹತ್ವದ್ದಾಗಿದೆ ಎಂದು ಸಾಹಿತಿ ಕೊಟ್ರೇಶ್ ಎಸ್. ಉಪ್ಪಾರ್ ಅಭಿಪ್ರಾಯಪಟ್ಟರು.

ಮಗ್ಗೆ- ಕಾರಗೋಡು ಇನ್‌ಸ್ಪೈರ್ ಇಂಟರ್ ನ್ಯಾಷನಲ್ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಚುನಾಯಿತ ವಿದ್ಯಾರ್ಥಿ ಪ್ರತಿನಿಧಿಗಳ ಮಕ್ಕಳ ಸಂಸತ್ತು ಸಮಾರಂಭ ಉದ್ಘಾಟಿಸಿ ಮಾತನಾಡಿ, ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ಮಕ್ಕಳ ಗ್ರಹಿಕೆಗೆ ತರುವಲ್ಲಿ ಶಾಲಾ ಸಂಸತ್ತು ಮಹತ್ತರ ಪಾತ್ರ ವಹಿಸುತ್ತದೆ. ವಿದ್ಯಾರ್ಥಿ ಚುನಾವಣೆಗಳು ನಾಯಕತ್ವ, ಸೇವಾ ಮನೋಭಾವ ಮುಂತಾದ ಮೌಲ್ಯಗಳನ್ನು ಬಿತ್ತುವುದರೊಂದಿಗೆ ಮಕ್ಕಳನ್ನು ಸಾಮಾಜಿಕ, ಸಾಂಸ್ಕೃತಿಕವಾಗಿ ವಿಕಸನಗೊಳಿಸಲು ಸಹಕಾರಿಯಾಗಿದೆ ಎಂದರು.

ಮಕ್ಕಳು ಕೇವಲ ಪಠ್ಯಕ್ಕೆ ಸೀಮಿತಗೊಳ್ಳದೇ ತರಗತಿಯಾಚೆಯ ಸಾಮಾಜಿಕ ಮೌಲ್ಯಗಳನ್ನು, ಜೀವನ ಕೌಶಲಗಳನ್ನು ಮಕ್ಕಳಲ್ಲಿ ಬೆಳೆಸಲು ಶಾಲೆಯ ಎಲ್ಲಾ ಮಕ್ಕಳಿಗೂ ಸ್ಕೌಟ್ಸ್ ಗೈಡ್ಸ್ ಶಿಕ್ಷಣ ನೀಡಿ ಮಕ್ಕಳಲ್ಲಿ ಶಿಸ್ತು, ಸಂಯಮ, ಸೇವಾ ಮನೋಭಾವ, ದೇಶಾಭಿಮಾನ ಮುಂತಾದ ಉದಾತ್ತ ಗುಣಗಳನ್ನು ಬೆಳೆಸಬೇಕೆಂಬುದು ಸಂಸ್ಥೆಯ ಮುಖ್ಯಸ್ಥರಾದ ಅಶೋಕ್‌ರವರ ಬಹುದೊಡ್ಡ ಕನಸು. ಶಿಕ್ಷಣವೆಂದರೆ ಕೇವಲ ವ್ಯಾಪರಿ ದೃಷ್ಟಿಕೋನದಡಿಯಲ್ಲಿ ವಿಮರ್ಶಿಸುವ ಇಂದಿನ ಕಾಲಘಟ್ಟದಲ್ಲಿ ಮಕ್ಕಳಲ್ಲಿ ಉತ್ತಮ ಸಂಸ್ಕಾರ ಜೊತೆಗೆ ಆದರ್ಶ ಪ್ರಜೆಗಳನ್ನಾಗಿ ಮಾಡಬೇಕು ಎಂದರು.



ಇನ್‌ಸ್ಪೈರ್ ಇಂಟರ್ ನ್ಯಾಷನಲ್ ಶಾಲೆಯ ಕಾರ್ಯದರ್ಶಿ ಅಶೋಕ್ ಮಾತನಾಡಿ, ವಿದ್ಯಾರ್ಥಿಗಳು ಕೇವಲ ಪಠ್ಯಕ್ಕೆ ಸೀಮಿತವಾದರೆ ಸರ್ವಾಂಗೀಣ ಪ್ರಗತಿಯಾಗುವುದಿಲ್ಲ. ತರಗತಿಯೊಳಗೆ ಪ್ರಗತಿಯಿದ್ದಂತೆ ಕ್ರೀಡಾ ಮೈದಾನದಲ್ಲೂ, ಸಾಂಸ್ಕೃತಿಕ ವಲಯದಲ್ಲೂ ಸಕ್ರಿಯವಾದರೆ ಔನತ್ಯ ಸಾಧನೆಗೈಯಲು ಸಹಕಾರಿ. ಸದರಿ ಶೈಕ್ಷಣಿಕ ವರ್ಷ ನಮ್ಮ ಶಾಲೆಯ ಮಕ್ಕಳು ತಾಲ್ಲೂಕು ಹಂತದ ಕ್ರೀಡಾಕೂಟದಲ್ಲಿ ಉತ್ತಮ ಸಾಧನೆ ಮಾಡುವ ಮೂಲಕ ಸಮಗ್ರ ಪ್ರಶಸ್ತಿ ತಂದಿರುವುದು ಸಂತಸ ನೀಡಿದೆ ಎಂದು ಹೇಳಿದರು.

ಭಾರತ್ ಸ್ಕೌಟ್ಸ್ ಗೈಡ್ಸ್ ಸಂಸ್ಥೆಯ ರಾಜ್ಯ ಸಹಾಯಕ ಸಂಘಟನಾ ಆಯುಕ್ತೆ ಎಚ್.ಎಂ. ಪ್ರಿಯಾಂಕ ಮಾತನಾಡಿ ಒಂದೇ ಶಾಲೆಯಲ್ಲಿ ಹದಿನಾರು ಶಿಕ್ಷಕರಿಗೆ ಸ್ಕೌಟ್ಸ್ ಗೈಡ್ಸ್ ತರಬೇತಿ ನೀಡಿ ಇಡೀ ಶಾಲೆಯ ಎಲ್ಲಾ ವಿದ್ಯಾರ್ಥಿಗಳನ್ನೂ ಸ್ಕೌಟ್ಸ್ ಗೈಡ್ಸ್ ಮಾಡುವ ನಿಟ್ಟಿನಲ್ಲಿ ಇನ್‌ಸ್ಪೈರ್ ಇಂಟರ್ ನ್ಯಾಷನಲ್ ಶಿಕ್ಷಣ ಸಂಸ್ಥೆ ಇಟ್ಟಿರುವ ಹೆಜ್ಜೆ ಅಭಿನಂದಾರ್ಹವಾಗಿದೆ. ಸ್ಕೌಟ್ಸ್ ಗೈಡ್ಸ್ ಮಕ್ಕಳಿಗಾಗಿ ವಿವಿಧ ಹಂತಗಳಲ್ಲಿ ಹಮ್ಮಿಕೊಳ್ಳುವ ಜಿಲ್ಲಾ ಪುರಸ್ಕಾರ, ರಾಜ್ಯ ಪುರಸ್ಕಾರ ಹಾಗೂ ರಾಷ್ಟ್ರಪತಿ ಪುರಸ್ಕಾರ ಪರೀಕ್ಷೆಗಳಲ್ಲಿ ಉತ್ತೀರ್ಣವಾದ ಮಕ್ಕಳಿಗೆ ಉನ್ನತ ವ್ಯಾಸಂಗವಾದ ಇಂಜಿನಿಯರಿಂಗ್, ವೈದ್ಯಕೀಯ ಶಿಕ್ಷಣಕ್ಕೆ ಮೀಸಲಾತಿಯಲ್ಲದೇ ರೈಲ್ವೇ ಇಲಾಖೆಯ ನೇಮಕಾತಿಗಳಲ್ಲಿ ಪ್ರತ್ಯೇಕ ಮೀಸಲಾತಿಯಿದೆ. ಸ್ಕೌಟ್ಸ್ ಗೈಡ್ಸ್ ಮಕ್ಕಳಲ್ಲಿ ಮೌಲ್ಯಗಳನ್ನು ಬಿತ್ತುವುದರ ಜೊತೆಗೆ ವೈಯಕ್ತಿಕ ಲಾಭವನ್ನೂ ತರುತ್ತದೆ ಎಂದರು.

ಶಾಲಾಭಿವೃದ್ಧಿ ಸಮಿತಿಯ ಅಧ್ಯಕ್ಷ ಪೂವಯ್ಯ, ಉಪಾಧ್ಯಕ್ಷ ಸಲೀಂ ಸಿರಾಜ್, ಸದಾನಂದ, ನವೀನ್, ನಂದೀಶ್, ವೆಂಕಟೇಶ್, ಧರ್ಮರಾಜ್, ಹರ್ಷಾ, ಸವಿತ ಹಾಗೂ ಆಸ್ಮಾ ಉಪಸ್ಥಿತರಿದ್ದರು.

## ಸೆ.8ಕ್ಕೆ ಜನಸ್ಪಂದನ ಸಭೆ

• ಪ್ರಜೋದಯ ವರದಿ

**ಹಾಸನ:** ಹೊಳೆನರಸೀಪುರ ಶಾಸಕ ಹೆಚ್.ಡಿ. ರೇವಣ್ಣ ಅವರು ಸೆ.8 ರಂದು ದುದ್ದ ಮತ್ತು ಶಾಂತಿಗ್ರಾಮ ಹೋಬಳಿ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳ ಗ್ರಾಮಗಳಲ್ಲಿ ಸಾರ್ವಜನಿಕರ ಕುಂದುಕೊರತೆ ಹಾಗೂ ಜನಸ್ಪಂದನ ಸಭೆಯನ್ನು ನಡೆಸಲಿದ್ದು, ಹಾಸನ ತಾಲ್ಲೂಕಿನ ಎಲ್ಲಾ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳು ಇತರೆ ಸಿಬ್ಬಂದಿಯನ್ನು ನಿಯೋಜಿಸದೆ ಖುದ್ದು ತಾವೇ ಸಭೆಗೆ ಹಾಜರಿರಲು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

## ವಾರ್ಷಿಕ ಮಹಾಸಭೆ

**ಹಾಸನ:** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಬಿ.ಪಿ.ಕೃಷ್ಣಗೌಡ ಅಧ್ಯಕ್ಷತೆಯಲ್ಲಿ 2024-25 ನೇ ಸಾಲಿನ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯನ್ನು ಸೆ.28 ರಂದು ಬೆಳಿಗ್ಗೆ 10.30 ಗಂಟೆಗೆ ಏರ್ಪಡಿಸಲಾಗಿದೆ ಎಂದು ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷರು ತಿಳಿಸಿದ್ದಾರೆ.

## ಸಮಯ ಸದ್ಬಳಕೆ ಮಾಡಿಕೊಳ್ಳಿ



• ಪ್ರಜೋದಯ ವರದಿ

**ಹಾಸನ:** ವಿದ್ಯಾರ್ಥಿ ಪ್ರತಿನಿಧಿ ಸಂಘ ಹಾಗೂ ಕಾಲೇಜಿನ ವಿವಿಧ ಸಂಘಗಳ ಉದ್ಘಾಟನಾ ಕಾರ್ಯಕ್ರಮ ಹಾಸನ ಬಿ.ಕಾಟಿಹಳ್ಳಿಯ ಸಂತ ಜೋಸೆಫರ ಕಾಲೇಜಿನ ಲಯೋಲಾ ಸಭಾಂಗಣದಲ್ಲಿ ಗುರುವಾರ ನಡೆಯಿತು.

ಡಿವೈಎಸ್.ಪಿ. ಮುರಳೀಧರ ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿ, ತಮ್ಮ ವಿದ್ಯಾರ್ಥಿ ಜೀವನದ ಏಳುಬೀಳುಗಳನ್ನು ತಿಳಿಸುವುದರ ಮೂಲಕ ವಿದ್ಯಾರ್ಥಿಗಳಿಗೆ ಪದವಿ ಹಂತದ ಸಮಯವನ್ನು ಸದ್ಬಳಕೆ ಮಾಡಿಕೊಳ್ಳುವ ಬಗ್ಗೆ ಹಾಗೂ ಇಂದಿನಿಂದಲೇ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸಿದರೆ ತಾವು ಕೂಡ ಐಎಎಸ್, ಐಪಿಎಸ್ ಮತ್ತು ಕೆಎಎಸ್‌ನಂತಹ ಪರೀಕ್ಷೆಗಳನ್ನು ಎದುರಿಸಲು ಸಾಧ್ಯ ಎಂದು ತಿಳಿಸುವುದರ ಮೂಲಕೆ ಮನವರಿಕೆ ಮಾಡಿಕೊಟ್ಟರು.

ಕಾಲೇಜಿನ ಪ್ರಾಂಶುಪಾಲರಾದ ಡಾ. ಮ್ಯಾಕ್ಸಿಂ ಡಾಯಸ್ ಎಸ್.ಜೆ., ಅವರು ವಿದ್ಯಾರ್ಥಿ ಪ್ರತಿನಿಧಿಗಳಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು.

ಕಾರ್ಯಕ್ರಮದಲ್ಲಿ ರೆ.ಫಾ. ಓಲ್ವಿನ್ ವೇಗಾಸ್ ಎಸ್. ಜೆ ರೆ. ಫಾ. ರೇಯಾನ್ ಪಿರೇರಾ ಎಸ್.ಜೆ ., ಉಪಪ್ರಾಂಶುಪಾಲರಾದ ಪ್ರದೀಪ್ ಕುಮಾರ್ ವಿ., ಕಾರ್ಯಕ್ರಮದ ಸಂಚಾಲಕ ಅನಿಲ್ ಎಂ.ಎಸ್ ಮತ್ತು ಎಲ್ಲಾ ವಿಭಾಗದ ಉಪನ್ಯಾಸಕ ವರ್ಗದವರು ಹಾಗೂ ವಿದ್ಯಾರ್ಥಿ ಪ್ರತಿನಿಧಿಗಳು, ಎಲ್ಲಾ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಸಿಮೆಂಟ್ ಮಂಜು ವಿರುದ್ಧ ತಹಶೀಲ್ದಾರ್ ಗರಂ

## ಸಾರ್ವಜನಿಕ ಕೆಲಸಕ್ಕೆ ಆದ್ಯತೆ ನೀಡಿ ಎಂದ ಶಾಸಕ | ಸಭೆಯಿಂದ ಹೊರ ನಡೆದ ಸುಪ್ರಿಯ

• ಪ್ರಜೋದಯ ವರದಿ

**ಸಕಲೇಶಪುರ:** ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಿ ಅವರ ತೆರಿಗೆ ಹಣದಿಂದ ಸಂಬಳ ಪಡೆಯುತ್ತಿದ್ದೇವೆಂಬ ಶಾಸಕ ಸಿಮೆಂಟ್ ಮಂಜು ಅವರ ಹೇಳಿಕೆಗೆ ತಹಶೀಲ್ದಾರ್ ಸುಪ್ರಿಯ ಸಿಡಿಮಿಡಿಗೊಂಡ ಘಟನೆಗೆ ಮಿನಿವಿಧಾನಸೌಧ ಬುಧವಾರ ಸಾಕ್ಷಿಯಾಯಿತು.

ಶ್ರೀ ನಾರಾಯಣಗುರು ಹಾಗು ವಿಶ್ವಕರ್ಮ ಜಯಂತಿ ಪೂರ್ವಭಾವಿ ಸಭೆಗೆ ಆಗಮಿಸಿದ ಶಾಸಕರೊಂದಿಗೆ ಸಾರ್ವಜನಿಕರು ಒಳಬಂದರು. ಅದರಿಂದ ಸಿಡಿಮಿಡಿಗೊಂಡ ತಹಶೀಲ್ದಾರ್ ಏರುಧ್ವನಿಯಲ್ಲಿ ಕೊಠಡಿಯಿಂದ ಹೊರಗಿರುವಂತೆ ಸೂಚಿಸಿದರು. ತಹಶೀಲ್ದಾರ್ ವರ್ತನೆಯಿಂದ ಕಸಿವಿಸಿಗೊಂಡ ಶಾಸಕ ಸಿಮೆಂಟ್ ಮಂಜು, ಯಾಕ್ರಿ, ಹೀಗೆ ಕೂಗಾಡುತ್ತಿರಾ, ಸೌಜನ್ಯದಿಂದ ಮಾತನಾಡಿ, ನಾವಿರುವುದೇ ಜನರ ಕೆಲಸ ಮಾಡಲು, ಅವರು ಕಟ್ಟುವ ತೆರಿಗೆಯಿಂದ ನಾವು-ನೀವು ಸಂಬಳ ಪಡೆಯುತ್ತಿದ್ದೇವೆಂದರು.

ಅದಕ್ಕೆ ಆಕ್ರೋಶಗೊಂಡ ತಹಶೀಲ್ದಾರ್, ನಾನಲ್ಲ ಕೂಗಾಡುತ್ತಿರುವುದು ನೀವು ಎಂದು ಏರುಧ್ವನಿಯಲ್ಲಿ ಪ್ರತಿಕ್ರಿಯಿಸಿದ್ದರಿಂದ ಸಭಾಂಗಣ ಮೌನಕ್ಕೆ ಜಾರಿತು. ಮಾತು ಮುಂದು ವರಿಸಿದ ತಹಶೀಲ್ದಾರ್ ಸಭೆ ನಡೆಸುವುದಾ ಅಥವಾ ಸಾರ್ವಜನಿಕ ಕೆಲಸ ಮಾಡುವುದಾ ಎಂದರು. ಮೊದಲು ಸಾರ್ವಜನಿಕರ ಕೆಲಸ ಮಾಡಿ ನಂತರ ಸಭೆ ನಡೆಸೋಣವೆಂದು



ಶಾಸಕರು ಹೇಳುತ್ತಿದ್ದಂತೆ ಕೋಪಗೊಂಡ ತಹಶೀಲ್ದಾರ್ ಕಡತಗಳೊಂದಿಗೆ ತಮ್ಮ ಕಚೇರಿಗೆ ತೆರಳಿದರು. ತಹಶೀಲ್ದಾರ್ ವಾಪಾಸ್ ಬರುತ್ತಾರೆಂದು ಕೆಲಕಾಲ ಕಾದರೂ ಬಾರದೆ ಇದ್ದರಿಂದ ಸಹಾಯಕ ತಹಶೀಲ್ದಾರ್ ಮೋಹನ್ ಕುಮಾರ್ ಉಪಸ್ಥಿತಿಯಲ್ಲಿ ಸಭೆ ಆರಂಭಿಸಲಾಯಿತು. ಸಭೆ ಮುಕ್ತಾಯವಾದರೂ ಸುಪ್ರಿಯ ಬರಲಿಲ್ಲ.

### ದೂರುಗಳ ಸುರಿಮಳೆ

ಸಾರ್ವಜನಿಕರ ಅಹವಾಲು ಆಲಿಸಿದ ಶಾಸಕರು, ಮುಂದಿನ ದಿನಗಳಲ್ಲಿ ಎಲ್ಲಾ ಸರಿಯಾ ಗಲಿದೆ. ಸಾರ್ವಜನಿಕರನ್ನು ವಿನಾಕಾರಣ ಅಲೆಸ ಬೇಡಿ ಎಂದು ಶಿರಸ್ತೇದಾರ್‌ಗಳಾದ ರವಿ ಕುಮಾರ್ ಹಾಗು ಶ್ವೇತಾ ಅವರಿಗೆ ಸೂಚನೆ ನೀಡಿದರು.ತಹಶೀಲ್ದಾರ್ ಸುಪ್ರಿಯ ವಿರುದ್ಧ ಸಾರ್ವಜನಿಕರು ದೂರುಗಳ ಸುರಿಮಳೆಗೈದರು. ತಿಂಗಳಾನುಗಟ್ಟಲೆ ಅಲೆದರು ಕೆಲಸವಾಗುವುದಿಲ್ಲ, ದೂರದ ಊರಿನಿಂದ ಬರುವ ನಮಗೆ ಕೆಲಸ ವಾಗದಿದ್ದರೆ ಸಾವಿರಾರು ರೂ. ಖರ್ಚಾಗುತ್ತಿದೆ. ಕೆಲಸಕ್ಕಾಗಿ ಪ್ರತಿದಿನ ಬಂದರೆ ಪದೇ ಪದೇ ಬರಬೇಡಿ ಎಂದು ತಹಶೀಲ್ದಾರ್ ಹೇಳುತ್ತಾರೆಂದು ಯಸಳೂರು ಹೋಬಳಿ ಸುಂಡಹಳ್ಳಿ ನಿವಾಸಿ ಮೋಹನ್ ದೂರಿದರು. ಎರಡೂವರೆ ವರ್ಷದಿಂದ ಕಚೇರಿ ಕೆಲಸಕ್ಕಾಗಿ ಬರುತ್ತಿದ್ದೇವೆ. ಮಧ್ಯ ವರ್ತಿಗಳ ಜೊತೆಗೆ ಬಂದರಷ್ಟೇ ನಮ್ಮ ಕಡತಗಳಿಗೆ ಸಹಿ ಆಗುತ್ತದೆಂದು ಯಡಕೇರಿ ಗ್ರಾಮದ ಪುಟ್ಟಸ್ವಾಮಿ, ಪುನೀತ್ ಆರೋಪಿಸಿದರು. ಮಣಜೂರು ಗ್ರಾಮದ ಗೀರಿಶ್ ಮಾತನಾಡಿ, ಒಂದು ವರ್ಷದಿಂದ ನೂರಾರು ಬಾರಿ 94 ಸಿಸಿ ಹಕ್ಕುಪತ್ರಕ್ಕಾಗಿ ಬರುತ್ತಿದ್ದೇವೆ. ಇಲ್ಲಿಗೆ ಬಂದ ಎಲ್ಲಾ ತಹಶೀಲ್ದಾರ್‌ಗಳು ಸ್ಥಳ ಪರಿಶೀಲನೆ ನಡೆಸಿದ್ದಾರೆ. ಹೊಸದಾಗಿ ಬಂದ ತಹಶೀಲ್ದಾರ್ ಮತ್ತೆ ಸ್ಥಳಪರಿಶೀಲನೆ ನಡೆಸಬೇಕು ಎನ್ನುತ್ತಾರೆ. ಕಚೇರಿಗೆ ಅಲೆದು ಸುಸ್ತಾಗಿದೆ. ಸೋಮವಾರದ ಒಳಗಾಗಿ ಹಕ್ಕುಪತ್ರ ನೀಡದಿದ್ದರೆ ಕಚೇರಿ ಎದುರು ಧರಣಿ ನಡೆಸುತ್ತೇವೆಂದು ಎಚ್ಚರಿಕೆ ನೀಡಿದರು.

# ಇವಿಎಂ ಬದಲು ಮತಪತ್ರಕ್ಕೆ ಸಂಪುಟ ಅಸ್ತು

» ಮೊದಲನೇ ಪುಟದಿಂದ

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಶುಲ್ಕ ಬದಲಾವಣೆ ಮಾಡಲಾಗಿದ್ದು, ಮಾರುಕಟ್ಟೆ ಶುಲ್ಕ 41 ಪೈಸೆಯಿಂದ 42 ಪೈಸೆಗೆ ಹೆಚ್ಚಳ ಮಾಡಲಾಗುವುದು, ವಹಿವಾಟು ವೆಚ್ಚ 0.01 ಪೈಸೆಗೆ ಹೆಚ್ಚಳ ಮಾಡಿ ಮಾರ್ಪಾಡು ಮಾಡಲಾಗುವುದೆಂದು ಹೇಳಿದ್ದಾರೆ.

**ಮೆಟ್ರೋ ಎಲಿವೇಟೆಡ್ ಕಾರಿಡಾರ್**

ಮೆಟ್ರೋ ಎಲಿವೇಟೆಡ್ ಕಾರಿಡಾರ್‌ಗೆ ಸಚಿವ ಸಂಪುಟ ಅನುಮೋದನೆ ನೀಡಿದೆ. ಮೆಟ್ರೋ ಹಂತ-3, ಜೆ.ಪಿ.ನಗರ 4ನೇ ಹಂತದಿಂದ ಹೆಬ್ಬಾಳದ ವರೆಗೆ ಹೊಸಹಳ್ಳಿಯಿಂದ ಮಾಗಡಿ ರಸ್ತೆ ಮಾರ್ಗವಾಗಿ ಕಡಬಗೆರೆ ವರೆಗೆ 37.121 ಕಿ.ಮೀ. ಉದ್ದದ ಡಬಲ್ ಡೆಕ್ಕರ್ ನಿರ್ಮಾಣಕ್ಕೆ ಒಪ್ಪಿಗೆ ನೀಡಲಾಗಿದೆ. ಬೆಂಗಳೂರು ದಕ್ಷಿಣ ಜಿಲ್ಲೆ ಕನಕಪುರ ತಾಲ್ಲೂಕಿನ ರಾಯಸಂದ್ರ ಗ್ರಾಮದಲ್ಲಿ ಹೊಸ ಮೆಡಿಕಲ್ ಕಾಲೇಜು ಸ್ಥಾಪನೆಗೆ ಸಚಿವ ಸಂಪುಟ ಅನುಮೋದನೆ ನೀಡಿದೆ. ಕರ್ನಾಟಕ ಗೃಹ ಮಂಡಳಿಯಿಂದ 65 ಕೋಟಿ ರೂ. ಮೊತ್ತದಲ್ಲಿ 25 ಎಕರೆ ಜಮೀನು ಖರೀದಿಸಲು ಆಡಳಿತಾತ್ಮಕ ಅನುಮೋದನೆ ಸಿಕ್ಕಿದೆ.

# ಡಿಜಿಟಲ್ ಗ್ರಂಥಾಲಯದಿಂದ ಜ್ಞಾನಾಭಿವೃದ್ಧಿ

## ಗ್ರಾಮ ಸ್ವರಾಜ್ ಭವನ ಉದ್ಘಾಟಿಸಿ ಹೆಚ್.ಪಿ.ಸ್ವರೂಪ್ ಅಭಿಮತ

• ಪ್ರಜೋದಯ ವರದಿ

**ಹಾಸನ:** ಮಕ್ಕಳಿಗೆ ಬಾಲ್ಯದಿಂದಲೇ ಗುಣಮಟ್ಟದ ಶಿಕ್ಷಣ ಕೊಡಿಸುವಲ್ಲಿ ಪೋಷಕರು ಮುಂದಾಗಬೇಕು. ಇದೇ ಕಾರಣಕ್ಕೆ ಶಾಲಾ ಹಂತದಲ್ಲಿಯೇ ಡಿಜಿಟಲ್ ಗ್ರಂಥಾಲಯಗಳನ್ನು ಅಳವಡಿಸುವ ಮೂಲಕ ವಿದ್ಯಾರ್ಥಿಗಳ ಜ್ಞಾನ ಹೆಚ್ಚಿಸುವ ಕೆಲಸವನ್ನು ಸರ್ಕಾರ ಮಾಡುತ್ತಿದೆ ಎಂದು ಶಾಸಕ ಹೆಚ್.ಪಿ. ಸ್ವರೂಪ್ ಅವರು ಹೇಳಿದರು.

ತಾಲ್ಲೂಕಿನ ದೊಡ್ಡಕೊಂಡಗೊಳ ಗ್ರಾಮದಲ್ಲಿ 25 ಲಕ್ಷ ರೂ. ವೆಚ್ಚದ ಗ್ರಾಮ ಸ್ವರಾಜ್ ಭವನ ಹಾಗು ಡಿಜಿಟಲ್ ಗ್ರಂಥಾಲಯವನ್ನು ಗುರುವಾರ ಉದ್ಘಾಟಿಸಿ ಮಾತನಾಡಿದ ಅವರು, ಮನುಷ್ಯನ ಜೀವನದಲ್ಲಿ ಶಿಕ್ಷಣ ಪ್ರಮುಖ ಪಾತ್ರ ವಹಿಸುತ್ತದೆ. ಆ ನಿಟ್ಟಿನಲ್ಲಿ ಸರ್ಕಾರ ಅಗತ್ಯ ಸೌಕರ್ಯಗಳನ್ನು ಒದಗಿಸುತ್ತದೆಂದು ತಿಳಿಸಿದರು.

ಪ್ರಗತಿ ಪಥದತ್ತ ಸಾಗುತ್ತಿರುವ ದೇಶದಲ್ಲಿ ಎಲ್ಲಾ ವಿಭಾಗಗಳು ಡಿಜಿಟಲೈಜೆಷನ್ ಆಗುತ್ತಿವೆ. ಇದೇ ರೀತಿ ಗ್ರಂಥಾಲಯಗಳು ಕೂಡ ಡಿಜಿಟಲ್ ಗ್ರಂಥಾಲಯಗಳಾಗಿ ಪರಿವರ್ತನೆಯಾಗುತ್ತಿದ್ದು, ಅದರಿಂದ ಈ ಹಿಂದೆ ಆಗುತ್ತಿದ್ದ ಹಲವು ಸಮಸ್ಯೆಗಳಿಗೆ ಕಡಿ



ವಾಣ ಹಾಕಲಾಗುತ್ತಿದೆ. ಅಗತ್ಯವಿರುವ ಎಲ್ಲಾ ಪುಸ್ತಕಗಳನ್ನು ಪಡೆಯಬಹುದು. ಎಲ್ಲರೂ ಇದರ ಸದುಪಯೋಗ ಪಡಿಸಿಕೊಳ್ಳ ಬೇಕೆಂದು ಕರೆ ನೀಡಿದರು.

ಗ್ರಾಮದಲ್ಲಿಂದು ಉದ್ಘಾಟನೆಯಾಗಿರುವ ಗ್ರಾಮಸ್ವರಾಜ್ ಭವನ ನಿರ್ಮಾಣಕ್ಕೂ ಹಲವು ವರ್ಷಗಳಿಂದ ಗ್ರಾಮಸ್ಥರು ಬೇಡಿಕೆ ಇಟ್ಟಿದ್ದರು. ಹಂತ ಹಂತವಾಗಿ ಕಾಮಗಾರಿ ಮುಗಿಸಿ ಗ್ರಾಮಸ್ಥರಿಗೆ ಅನುಕೂಲ ಕಲ್ಪಿಸಲಾಗಿದೆ. ಈ ಹಿಂದೆ ಅದರ ಸುತ್ತಲಿನ ಜಾಗ ಒತ್ತುವರಿಯಾಗಿದ್ದಾಗಲೂ ಗ್ರಾಮಸ್ಥರು ಹೋರಾಟ ಮಾಡಿ ಅದನ್ನು ಉಳಿಸಿಕೊಂಡು, ಇದೀಗ ಎಲ್ಲರಿಗೂ ಅನುಕೂಲವಾಗುವ ನಿಟ್ಟಿನಲ್ಲಿ ಭವನ ನಿರ್ಮಾಣ ಮಾಡಲಾಗಿದೆ. ಜನರು ಅದರ ಸದುಪಯೋಗ ಪಡಿಸಿಕೊಳ್ಳಬೇಕೆಂದು ಹೇಳಿದರು.

ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಶ್ರೀ ನಿಶ್ಚಲಾನಂದನಾಥ ಸ್ವಾಮೀಜಿ ಆಶೀರ್ವಚನ ನೀಡಿದರು. ಲೇಖಕಿ ರೂಪ ಹಾಸನ, ಕಾಂಗ್ರೆಸ್ ಮುಖಂಡ ಹೆಚ್.ಕೆ.ಮಹೇಶ್, ಮುಖಂಡರು, ಗ್ರಾಮಸ್ಥರು ಸೇರಿ ಹಲವರು ಹಾಜರಿದ್ದರು.

# 60 ಸಾವಿರ ರೂ. ಮೌಲ್ಯದ ಹೋರಿ ಕಳವು

• ಪ್ರಜೋದಯ ವರದಿ

**ಬೇಲೂರು:** ಕೊಟ್ಟಿಗೆಯಲ್ಲಿ ಕಟ್ಟಿದ್ದ ಸುಮಾರು 60 ಸಾವಿರ ರೂ. ಬೆಲೆಯ ಹೋರಿಯನ್ನು ಕಳವು ಮಾಡಿರುವ ಘಟನೆ ತಾಲ್ಲೂಕಿನ ಮತಿಘಟ್ಟ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಕಾಳೇಗೌಡ ಎಂಬುವವರಿಗೆ ಸೇರಿದ ಹೋರಿಯನ್ನು ಆ. 28ರ ರಾತ್ರಿ ಕಳವು ಮಾಡಿದ್ದಾರೆ. 56 ಸಾವಿರ ರೂ.ಗೆ ಹೋರಿ ಮಾರಾಟವಾಗಿತ್ತು. ಆ.27 ರಂದು ಕೆ.ಹೊಸೂರು ಗ್ರಾಮದ ಅಬ್ದುಲ್ ಸಹಾನ್ ಎಂಬ ವ್ಯಾಪಾರಿ ಮುಂಗಡ ಹಣ ಸಹ ಕೊಟ್ಟಿದ್ದ. ಆದರೆ ಅದರ ಮಾರನೇ ದಿನ ಕೊಟ್ಟಿಗೆಯಿಂದ ಹೋರಿ ನಾಪತ್ತೆಯಾಗಿರುವುದು ಸಾಕಷ್ಟು ಅನುಮಾನಗಳಿಗೆ ಎಡೆಮಾಡಿ ಕೊಟ್ಟಿದೆ.

ಹಳೇಬೀಡು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಐಪಿಎಲ್ ಟಿಕೆಟ್ ದರ ದುಬಾರಿ




• ಪ್ರಜೋದಯ ವರದಿ

**ನವದೆಹಲಿ:** ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ದರಗಳನ್ನು ಪರಿಷ್ಕರಣೆಯಾದ ಹಿನ್ನೆಲೆ ಮುಂಬರುವ ಆವೃತ್ತಿಗಳಲ್ಲಿ ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) ಪಂದ್ಯಗಳ ಟಿಕೆಟ್ ದರ ಏರಿಕೆಯಾಗಲಿದೆ.

ಕ್ಯಾಸಿನೊ, ರೇಸ್ ಕ್ಲಬ್ ಸೇರಿ ಐಪಿಎಲ್ ರೀತಿಯ ಆಟಗಳ ಟಿಕೆಟ್‌ಗೆ ಶೇ.40 ರಷ್ಟು ತೆರಿಗೆ ವಿಧಿಸಿ ಕೇಂದ್ರ ಸರ್ಕಾರ ಪ್ರಕಟಣೆ ಹೊರಡಿಸಿದೆ. ಐಪಿಎಲ್ ಟಿಕೆಟ್‌ಗಳ ಬೆಲೆ 500 ಇದ್ದರೆ, ಇದಕ್ಕೆ ಈ ಹಿಂದೆ ಇದ್ದ ಶೇ.28 ಜಿಎಸ್‌ಟಿ ಸೇರಿದರೆ 640 ಆಗುತ್ತಿತ್ತು. ಈಗ ಶೇ.40ರಷ್ಟು ತೆರಿಗೆ ವಿಧಿಸಿದ ಹಿನ್ನೆಲೆ ಟಿಕೆಟ್ ದರ 700 ಆಗಲಿದೆ.

ಹೊಸ ನಿಯಮದ ಪ್ರಕಾರ, ದೇಶದಲ್ಲಿ ನೋಂದಣಿಯಾಗಿರುವ ಆಟಗಳಿಗೆ ಟಿಕೆಟ್ ದರ 500ರ ಇದ್ದರೆ ತೆರಿಗೆಯಿಂದ ವಿನಾಯಿತಿ ನೀಡಲಾಗಿದೆ. 500ಕ್ಕಿಂತ ಹೆಚ್ಚಿದ್ದರೆ ಶೇ.18 ರಷ್ಟು ತೆರಿಗೆ ಇರಲಿದೆ. ಐಪಿಎಲ್ ಅನ್ನು ಐಷಾರಾಮಿ ಸರಕುಗಳ ವಿಭಾಗಕ್ಕೆ ಸೇರಿಸಿರುವುದರಿಂದ ಹೆಚ್ಚಿನ ತೆರಿಗೆ ವಿಧಿಸಲಾಗಿದೆ.

# ರಕ್ತದಾನದಿಂದ ಆರೋಗ್ಯ ವೃದ್ಧಿ: ಸಿಮೆಂಟ್ ಮಂಜು

• ಪ್ರಜೋದಯ ವರದಿ

**ಸಕಲೇಶಪುರ:** ನಿಯಮಿತವಾಗಿ ರಕ್ತದಾನ ಮಾಡುವುದರಿಂದ ಆರೋಗ್ಯ ಕಾಪಾಡಿಕೊಳ್ಳ ಬಹುದೆಂದು ಶಾಸಕ ಸಿಮೆಂಟ್ ಮಂಜು ಅವರು ಹೇಳಿದರು.

ಪಟ್ಟಣದ ಲಯನ್ಸ್ ಸಭಾಂಗಣದಲ್ಲಿ ಲಯನ್ಸ್ ಕ್ಲಬ್, ಜಿಲ್ಲಾ ಜನಜಾಗೃತಿ ವೇದಿಕೆ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗು ಹಾಸನ ಜೀವ ರಕ್ತ ನಿಧಿ ವತಿಯಿಂದ ಗುರುವಾರ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿ, ರಕ್ತಕ್ಕೆ ಪರ್ಯಾಯವಿಲ್ಲ. ಆರೋಗ್ಯವಂತರು ನಿಯಮಿತವಾಗಿ ರಕ್ತದಾನ ಮಾಡಿದರೆ ಅನೇಕ ಜೀವ ಉಳಿಸಬಹುದು. ಮನುಷ್ಯನಿಗೆ ಏನು ಇಲ್ಲದಿದ್ದರೂ ಪರವಾಗಿಲ್ಲ, ಆದರೆ ಆರೋಗ್ಯ ಉತ್ತಮವಾಗಿರಬೇಕು. ಆರೋಗ್ಯವೇ ಭಾಗ್ಯ. ವೈದ್ಯರು ದೇವರ ಸಮಾನರು. ತಮ್ಮ ಆರೋಗ್ಯವನ್ನು ಮರೆತು ಇತರರ ಜೀವ ಉಳಿಸಲು ಶ್ರಮಿಸುತ್ತಾರೆ. ಇಂತಹ ಶಿಬಿರಗಳು ಇನ್ನಷ್ಟು ನಡೆಯಲಿ ಎಂದು ಹೇಳಿದರು.

ಲಯನ್ಸ್ ಸಂಸ್ಥೆ ತಾಲ್ಲೂಕು ಅಧ್ಯಕ್ಷ ಮಂಜುನಾಥ್ ಅವರು ಮಾತನಾಡಿ,




ತಾಲ್ಲೂಕು ಲಯನ್ಸ್ ಸಂಸ್ಥೆಯು ನಿರಂತರವಾಗಿ ಜನಪರ ಕಾರ್ಯಕ್ರಮ ಕೈಗೊಳ್ಳುತ್ತಿದೆ. ಅತಿ ಕಡಿಮೆ ಅವಧಿಯಲ್ಲಿ ಡಾ॥ನವೀನ್ ಚಂದ್ರ ಶೆಟ್ಟಿ ಅವರ ಬಯಕೆಯಂತೆ ಈ ಶಿಬಿರ ಆಯೋಜನೆಯಾಗಿದೆಯೆಂದು ಹೇಳಿದರು.

ಡಾ॥ ನವೀನ್ ಚಂದ್ರಶೆಟ್ಟಿ ಅವರು ಮಾತನಾಡಿ, ರಕ್ತದಾನದ ಮೂಲಕ ಅಪಘಾತದಲ್ಲಿ ಗಾಯಗೊಂಡವರು, ಹೆರಿಗೆ ಸಂದರ್ಭದ ತಾಯಂದಿರು, ಹೃದಯ ಹಾಗು ಮೂತ್ರಪಿಂಡದ ಗಂಭೀರ ಶಸ್ತ್ರಚಿಕಿತ್ಸೆಗೆ ಒಳಗಾಗುವವರು, ರಕ್ತಹೀನತೆಯಿಂದ ಬಳಲುವ ಮಕ್ಕಳು ಇವರೆಲ್ಲರಿಗೂ ಜೀವ ದೊರೆಯುತ್ತದೆಂದು ತಿಳಿಸಿದರು.

ವೈದ್ಯಕೀಯ ತಜ್ಞರ ಪ್ರಕಾರ ಆರೋಗ್ಯವಂತ ವ್ಯಕ್ತಿಯು ನಿಯಮಿತವಾಗಿ ರಕ್ತದಾನ ಮಾಡಿದರೆ ದೇಹದಲ್ಲಿ ಹೊಸ ರಕ್ತಕಣಗಳ ಉತ್ಪತ್ತಿಯಾಗುತ್ತದೆ. ಅದರಿಂದ ರಕ್ತ ಸಂಚಾರದ ದೋಷ ಕಡಿಮೆಯಾಗುತ್ತದೆ. ಹೃದಯ ರೋಗಗಳ ಸಂಭವ ತಗ್ಗುತ್ತದೆ. ರಕ್ತದಾನ ಮಾಡುವವನು ಕೇವಲ ಮತ್ತೊಬ್ಬರಿಗೆ ಜೀವ ನೀಡುವುದಲ್ಲ, ತನ್ನ ಆರೋಗ್ಯವನ್ನು ಕಾಪಾಡಿಕೊಳ್ಳುತ್ತಾನೆಂದರು.

ಲಯನ್ಸ್ ಸಂಸ್ಥೆಯ ಮಾಜಿ ರಾಜ್ಯಪಾಲ ಸಂಜೀತ್ ಶೆಟ್ಟಿ, ಕಾರ್ಯದರ್ಶಿ ಬಸವರಾಜ್, ಖಜಾಂಚಿ ಜಗದೀಶ್, ಪದಾಧಿಕಾರಿಗಳಾದ ಪ್ರಸನ್ನ ಕುಮಾರ್, ವಿಠ್ಠಲ್, ದಿವಾಕರ್, ವೆಂಕಟೇಶ್, ಜೀವ ರಕ್ತ ನಿಧಿಯ ಡಾ.ಮೋಹನ್, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ರಾಜೇಶ್ ಹಾಗು ಇತರರಿದ್ದರು.

# ವಸತಿ ಗೋಲ್ಮಾಲ್: ಅಧಿಕಾರಿಗಳ ಮೇಲೆ ಕ್ರಮ ಯಾವಾಗ ?

» ಮೊದಲನೇ ಪುಟದಿಂದ

ಅವ್ಯವಹಾರ ನಡೆಯದಂತೆ ಹಂಗಾಮಿ ನೌಕರನ ಮೇಲೆ ನಿಗಾ ವಹಿಸಬೇಕಿದ್ದ, ಅಕ್ರಮಗಳ ಬಗ್ಗೆ ಪರಿಶೀಲನೆ ನಡೆಸಿ ಹಣ ಮಂಜೂರು ಮಾಡಬೇಕಿದ್ದ ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮೇಲೆ ಸರ್ಕಾರವಾಗಲಿ, ಪಂಚಾಯತ್ ರಾಜ್ ಇಲಾಖೆಯಾಗಲಿ ಕ್ರಮ ಕೈಗೊಳ್ಳದಿರುವುದು ಅವ್ಯವಹಾರದ ತನಿಖೆ ಹಳ್ಳ ಹಿಡಿಯುವಂತೆ ಮಾಡಿದೆ.

**ಸಚಿವರು ಗಮನ ಹರಿಸಲಿ**

ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಅಧಿಕಾರಿಗಳಿಗೆ ತಿಳಿಯದೆ ಕೋಟ್ಯಾಂತರ ರೂ. ಹಣ ವರ್ಗಾವಣೆ ಮಾಡಲು ಒಬ್ಬ ಹಂಗಾಮಿ ನೌಕರನಿಗೆ ಸಾಧ್ಯವೇ ಎಂಬ ಪ್ರಶ್ನೆಯನ್ನು ಸಾರ್ವಜನಿಕರು ಎತ್ತುತ್ತಿದ್ದಾರೆ. ಈ ಅಕ್ರಮದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಭಾಗಿಯಾಗಿದ್ದಾರೆ. ಈ ಬಗ್ಗೆ ಉನ್ನತಮಟ್ಟದ ತನಿಖೆ ನಡೆಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತ್ ರಾಜ್ ಇಲಾಖೆ ಮೇಲಾಧಿಕಾರಿಗಳು, ಸಚಿವರು ಮುಂದಾಗಬೇಕು. ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಅಧಿಕಾರಿಗಳ ಮೇಲೆ ಪ್ರಕರಣ ದಾಖಲಿಸಿಕೊಂಡು ಅವರನ್ನು ಅಮಾನತುಗೊಳಿಸಬೇಕೆಂದು ಸಂತ್ರಸ್ತರು ಒತ್ತಾಯಿಸಿದ್ದಾರೆ.

**ಧ್ವನಿ ಎತ್ತಿದ್ದಕ್ಕೆ ಪಿಡಿಒ ಅಮಾನತು**

ಅರಸೀಕೆರೆ ತಾಲ್ಲೂಕಿನ ಬಾಣಾವರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪಿಎಂಎವೈ ಅವ್ಯವಹಾರಕ್ಕೆ ಸಂಬಂಧಪಟ್ಟಂತೆ ಗೃಹಮಂಡಳಿ ಅಧ್ಯಕ್ಷ ಕೆ.ಎಂ. ಶಿವಲಿಂಗೇಗೌಡ ಮತ್ತು ಜೆಡಿಎಸ್ ಮುಖಂಡ ಎನ್.ಆರ್.ಸಂತೋಷ್ ಅವರ ನಡುವೆ ಆರೋಪ-ಪ್ರತ್ಯಾರೋಪ ತಾರಕಕ್ಕೇರಿದ್ದರಿಂದಲೇ ಅಕ್ರಮ ಬಯಲುಗೊಂಡು ಬಾಣಾವರ ಗ್ರಾಮ ಪಂಚಾಯಿತಿ ಎನ್.ಕುಮಾರ ಸ್ವಾಮಿ ಅವರನ್ನು ಅಮಾನತುಗೊಳಿಸಿ, ತಾಲ್ಲೂಕು ನೋಡಲ್ ಅಧಿಕಾರಿ ಪಾಲಾಕ್ಷ ಅವರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಲಾಯಿತು. ಅಕ್ರಮದ ಬಗ್ಗೆ ಎನ್.ಆರ್.ಸಂತೋಷ್ ಅವರು ಧ್ವನಿ ಎತ್ತದೆ ಇದ್ದರೆ ಪಿಡಿಒ ಮೇಲೆ ಕ್ರಮವಾಗುತ್ತಿರಲಿಲ್ಲ. ಇದೇ ರೀತಿ ಪ್ರತಿ ತಾಲ್ಲೂಕಿನಲ್ಲೂ ಪಿಎಂಎವೈ ಯೋಜನೆಯಡಿ ಸಾಕಷ್ಟು ಅವ್ಯವಹಾರ ನಡೆದಿದೆ. ಈ ಬಗ್ಗೆ ಸಮಗ್ರ ತನಿಖೆ ನಡೆಯಬೇಕೆಂಬ ಒತ್ತಾಯ ಕೇಳಿಬಂದಿದೆ.

# ಡಿಕೆಶಿ ದೇಶದ 2ನೇ ಶ್ರೀಮಂತ ಸಚಿವ

**ನವದೆಹಲಿ:** ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ದೇಶದ ಎರಡನೇ ಶ್ರೀಮಂತ ಸಚಿವ ಎಂದು ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ ವರದಿ ಹೇಳಿದೆ.

ರಾಜ್ಯ ವಿಧಾನಸಭೆಗಳು, ಕೇಂದ್ರಾಡಳಿತ ಪ್ರದೇಶಗಳು ಮತ್ತು ಕೇಂದ್ರ ಸಚಿವರು ಚುನಾವಣೆ ಸಂದರ್ಭದಲ್ಲಿ ಸಲ್ಲಿಸಿದ ಅಫಿಡವಿಟ್‌ಗಳನ್ನು ವಿಶ್ಲೇಷಿಸಿ ಎಡಿಆರ್ ಗುರುವಾರ ವರದಿ ಬಿಡುಗಡೆ ಮಾಡಿದೆ. 27 ವಿಧಾನ ಸಭೆಗಳು, 3 ಕೇಂದ್ರಾಡಳಿತ ಪ್ರದೇಶ ಗಳು ಮತ್ತು ಕೇಂದ್ರದ 652 ಸಚಿವರ ಪೈಕಿ 643 ಸಚಿವರ ಅಫಿಡವಿಟ್‌ಗಳನ್ನು ವಿಶ್ಲೇಷಿಸಲಾಗಿದೆ. ಕರ್ನಾಟಕದಲ್ಲಿ ನೂರು ಕೋಟಿಗಿಂತ ಹೆಚ್ಚು ಆಸ್ತಿ ಇರುವ ಎಂಟು ಸಚಿವರು ಇದ್ದಾರೆ. ಆಂಧ್ರ ಪ್ರದೇಶವು ನಂತರದ ಸ್ಥಾನದಲ್ಲಿದೆ. ಕೇಂದ್ರ ಸಚಿವ ಚಂದ್ರಶೇಖರ್ ಪೆಮ್ಮಸಾನಿ ಪ್ರಥಮ ಸ್ಥಾನದಲ್ಲಿದ್ದಾರೆ.

643 ಸಚಿವರ ಪೈಕಿ 302 ಮಂದಿ (ಶೇ.47) ವಿರುದ್ಧ ಕ್ರಿಮಿನಲ್ ಪ್ರಕರಣಗಳಿವೆ. 174 ಸಚಿವರ ವಿರುದ್ಧ (ಶೇ.27) ಗಂಭೀರ ಅಪರಾಧ ಪ್ರಕರಣಗಳಿವೆ. ಈ ಸಚಿವರು ಕೊಲೆ, ಕೊಲೆಯತ್ನ, ಅಪಹರಣ, ಮಹಿಳೆಯರ ವಿರುದ್ಧದ ಅಪರಾಧಗಳು ಸೇರಿ ಗಂಭೀರ ಪ್ರಕರಣಗಳಲ್ಲಿ ಭಾಗಿಯಾಗಿದ್ದಾರೆ.

# ಹೋಬಳಿ ಕ್ರೀಡಾಕೂಟ: ಯಸಳೂರು ಶಾಲೆಗೆ ಸಮಗ್ರ ಪ್ರಶಸ್ತಿ



• ಪ್ರಜೋದಯ ವರದಿ

**ಸಕಲೇಶಪುರ:** ಹೋಬಳಿ ಮಟ್ಟದ ಕ್ರೀಡಾಕೂಟದಲ್ಲಿ ತಾಲ್ಲೂಕಿನ ಯಸಳೂರು ಡಾ.ಬಿ.ಆರ್. ಅಂಬೇಡ್ಕರ್ ವಸತಿ ಶಾಲೆ ಸಮಗ್ರ ಪ್ರಶಸ್ತಿ ಪಡೆದಿದೆ.

ಬಾಲಕರ ವಿಭಾಗದಲ್ಲಿ 300 ಮೀ. ಓಟ, 1500 ಮೀ. ಓಟ, 100 ಮೀ. ಓಟ, 4x100 ರಿಲೇ, ಉದ್ದ ಜಿಗಿತ, ಶಾಟ್‌ಪುಟ್, ಟ್ರಿಪಲ್ ಜಂಪ್, ಹೈಜಂಪ್, ಹ್ಯಾಮರ್ ಥ್ರೋ, ಡಿಸ್ಕ್ ಥ್ರೋ, ಜಾವೆಲಿನ್ ಥ್ರೋ, ಖೋ-ಖೋ, ವಾಲಿಬಾಲ್, ಬಾಲ್ ಬ್ಯಾಡ್ಮಿಂಟನ್‌ನಲ್ಲಿ ಪ್ರಥಮ ಸ್ಥಾನ ಪಡೆದಿದೆ. ಅದೇ ರೀತಿ 3000 ಮೀ., 400 ಮೀಟರ್ ಓಟ, ಟ್ರಿಪಲ್ ಜಂಪ್, ಹೈಜಂಪ್, ಶಾಟ್‌ಪುಟ್, ಹ್ಯಾಮರ್ ಥ್ರೋ, ಡಿಸ್ಕಸ್ ಥ್ರೋ, ಜಾವೆಲಿನ್, ಕಬಡ್ಡಿ, ಥ್ರೋಬಾಲ್ ಹಾಗು 800 ಮೀ ಓಟದಲ್ಲಿ ದ್ವಿತೀಯ ಸ್ಥಾನ ಪಡೆದು ಶಾಲೆಯ ವಿದ್ಯಾರ್ಥಿಗಳು ಕೀರ್ತಿ ತಂದಿದ್ದಾರೆ. ಬಾಲಕಿಯರ ವಿಭಾಗದಲ್ಲಿ 300 ಮೀ., 1500 ಮೀ. ಓಟ, 4x100 ರಿಲೇ, ಟ್ರಿಪಲ್ ಜಂಪ್, ಹೈಜಂಪ್, ಹ್ಯಾಮರ್ ಥ್ರೋ, ಡಿಸ್ಕ್ ಥ್ರೋ, ಜಾವೆಲಿನ್ ಥ್ರೋ, ಖೋ-ಖೋ, ವಾಲಿಬಾಲ್, ಕಬಡ್ಡಿ ಪಂದ್ಯದಲ್ಲಿ ಪ್ರಥಮ ಸ್ಥಾನ ಗಳಿಸಿದ್ದಾರೆ. 3000 ಮೀ., 800 ಮೀ., 400 ಮೀ. ಹಾಗು 100 ಮೀ. ಓಟ, ಶಾಟ್‌ಪುಟ್, ಹೈಜಂಪ್, ಲಾಂಗ್ ಜಂಪ್, ಟ್ರಿಪಲ್ ಜಂಪ್, ಬಾಲ್ ಬ್ಯಾಡ್ಮಿಂಟನ್, ಡಿಸ್ಕಸ್ ಥ್ರೋ ಹಾಗು ಹ್ಯಾಮರ್ ಥ್ರೋ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ. ವಿದ್ಯಾರ್ಥಿಗಳ ಕ್ರೀಡಾ ಸಾಧನೆಗೆ ಶಿಕ್ಷಕರು ಹಾಗು ಬೋಧಕೇತರ ಸಿಬ್ಬಂದಿ ಅಭಿನಂದನೆ ಸಲ್ಲಿಸಿದ್ದಾರೆ.

# ದಸರಾ ಉದ್ಘಾಟಕರ ಆಯ್ಕೆ ಮರುಪರಿಶೀಲನೆಗೆ ಒತ್ತಾಯ

• ಪ್ರಜೋದಯ ವರದಿ

**ಹಾಸನ:** ನಾಡಹಬ್ಬ ದಸರಾ ಉದ್ಘಾಟನೆಗೆ ಉದ್ಘಾಟಕರ ಆಯ್ಕೆ ವಿಚಾರದಲ್ಲಿ ಸರ್ಕಾರ ಮರುಪರಿಶೀಲನೆ ಮಾಡಬೇಕೆಂದು ಆಗ್ರಹಿಸಿ ಹಿಂದೂ ಜನಜಾಗೃತಿ ಸಮಿತಿ ವತಿಯಿಂದ ಜಿಲ್ಲಾಧಿಕಾರಿ ಮೂಲಕ ರಾಜ್ಯ ಸರ್ಕಾರಕ್ಕೆ ಗುರುವಾರ ಮನವಿ ಸಲ್ಲಿಸಲಾಯಿತು.

ಹಿಂದೂ ಜನಜಾಗೃತಿ ಸಮಿತಿ ಮುಖಂಡ ಅನಂತರಾಜು ಅವರು ಮಾತನಾಡಿ, ಅಂತರ ರಾಷ್ಟ್ರೀಯ ಬೂಕರ್ ಪ್ರಶಸ್ತಿ ಪುರಸ್ಕೃತ ಬಾನು ಮುಷ್ತಾಕ್ ಅವರನ್ನು ದಸರಾ ಉದ್ಘಾಟನೆಗೆ ಆಹ್ವಾನಿಸಿರುವುದು ಹಿಂದೂಗಳಿಗೆ ಅಪಮಾನ ಮಾಡಿದಂತಾಗಿದೆ. ಬಾನು ಮುಷ್ತಾಕ್ ಮುಸ್ಲಿಂ ಸಮುದಾಯಕ್ಕೆ ಸೇರಿದವರೆಂಬ ಕಾರಣಕ್ಕೆ ವಿರೋಧಿಸುತ್ತಿಲ್ಲ. ಕವಿ ನಿಸಾರ್ ಅಹಮದ್ ಅವರು ದಸರಾ ಉದ್ಘಾಟಿಸಿದಾಗ ಎಲ್ಲರೂ ಸ್ವಾಗತಿಸಿದ್ದೆವು. ಆದರೆ ಬಾನು ಮುಷ್ತಾಕ್ ವಿಚಾರದಲ್ಲಿ ವೈರುಧ್ಯಗಳಿವೆಯೆಂದರು.



ಮೈಸೂರು ದಸರಾ ಕೇವಲ ಸಾಂಸ್ಕೃತಿಕ ಹಬ್ಬವಲ್ಲ, ನವರಾತ್ರಿಯ ಒಂಬತ್ತು ದಿನಗಳಲ್ಲಿ ಕಾಳಿ, ಮಹಾಲಕ್ಷ್ಮಿ ಮತ್ತು ಸರಸ್ವತಿ ದೇವಿಯ ಆರಾಧನೆ ನಡೆಯುತ್ತದೆ. ವಿಜಯ ದಶಮಿ ಯಂದು ಚಾಮುಂಡೇಶ್ವರಿ ದೇವಿ ಮಹಿಷಾಸುರನ ಸಂಹಾರ ಮಾಡಿದ ನೆನಪಿಗಾಗಿ ವಿಜಯೋತ್ಸವ ಆಚರಿಸಲಾಗುತ್ತದೆ.ಅಂತಹ ಪವಿತ್ರ ಹಬ್ಬದ ಉದ್ಘಾಟನೆಗೆ ಆಯ್ಕೆಯಾಗುವವರು ನಾಡದೇವಿ ಮೇಲೆ ಗೌರವ ಹೊಂದಿರಬೇಕು. ಬಾನು ಮುಷ್ತಾಕ್ ಭುವನೇಶ್ವರಿ ದೇವಿಯನ್ನು ನಂಬುವುದಿಲ್ಲವೆಂದು ಹೇಳಿರುವುದು, ಜೊತೆಗೆ ದತ್ತಪೀಠ ಹೋರಾಟದ ಸಂದರ್ಭದಲ್ಲೂ ಮುಸ್ಲಿಂ ಪರವಾಗಿ ನಿಲುವು ತಳೆದಿರುವುದು ಭಕ್ತರಲ್ಲಿ ಅಸಮಾಧಾನ ಉಂಟುಮಾಡಿದೆ. ಭುವನೇಶ್ವರಿ ಕುರಿತು ಅವಹೇಳನಕಾರಿಯಾಗಿ ಮಾತನಾಡಿರುವ ಬಾನು ಮುಷ್ತಾಕ್ ಮುಂದೊಂದು ದಿನ ಚಾಮುಂಡೇಶ್ವರಿ ಬಗ್ಗೆಯೂ ಹಗುರವಾಗಿ ಮಾತನಾಡಬಹುದು. ಈ ವಿಚಾರದಲ್ಲಿ ಸರ್ಕಾರ ನಿಲುವು ಬದಲಿಸಬೇಕೆಂದು ಒತ್ತಾಯಿಸಿದರು.

ಹಿಂದೂ ಜನಜಾಗೃತಿ ಸಮಿತಿ ಸುಜಾತಾ, ಗೋವಿಂದರಾಜು, ಪ್ರಕಾಶ್, ವೇದ, ಲಕ್ಷ್ಮೀ, ಪುಷ್ಪಾ, ದೇವಿಕ ಮತ್ತಿತರರಿದ್ದರು.

# ಜಿಲ್ಲೆಯ ಇಬ್ಬರಿಗೆ ರಾಜ್ಯ ಮಟ್ಟದ ದತ್ತಿ ಪ್ರಶಸ್ತಿ

• ಪ್ರಜೋದಯ ವರದಿ




**ಹಾಸನ:** ನಗರದ ಆಚಾರ್ಯ ಕಾಮರ್ಸ್ ಕಾಲೇಜಿನಲ್ಲಿ ಸೆ.6ರ ಶನಿವಾರ ಚುಟುಕು ಸಾಹಿತ್ಯ ಪರಿಷತ್ ವತಿಯಿಂದ ಹಳೆ ಬೇರು-ಹೊಸ ಚಿಗುರು ಕಾರ್ಯಕ್ರಮದಲ್ಲಿ ರಾಜ್ಯ ಮಟ್ಟದ ದತ್ತಿ ಪ್ರಶಸ್ತಿ ಪ್ರದಾನ ಮಾಡುತ್ತಿದ್ದು ಜಿಲ್ಲೆಯ ಇಬ್ಬರು ಆಯ್ಕೆಯಾಗಿದ್ದಾರೆ.

ಚುಟುಕು ಕವಿಗೋಷ್ಠಿ, ಚುಟುಕು ಸಾಹಿತ್ಯದ ಗಮ್ಯತೆ ಹಾಗು ಪ್ರಭಾವ ವಿಷಯದ ಕುರಿತು ಚುಟುಕೋತ್ಸವ ನಡೆಯಲಿದೆ. ತುಮಕೂರು ಸಪ್ತಗಿರಿ ಕಾಲೇಜಿನ ಸಹಾಯಕ ಪ್ರಾಧ್ಯಾಪಕಿ ಸೌಮ್ಯಶ್ರೀ ಪ್ರಧಾನ ಭಾಷಣ ಮಾಡುವರು.

ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷ ಬಾ.ನಂ.ಲೋಕೇಶ್ ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದು ಉದ್ಘಾಟನೆಯನ್ನು ಕೇಂದ್ರ ಚುಟುಕು ಸಾಹಿತ್ಯ ಪರಿಷತ್ ಸಂಸ್ಥಾಪಕ ಡಾ.ಎಂ.ಜಿ. ಆರ್.ಅರಸ್ ನೆರವೇರಿಸಲಿದ್ದಾರೆ. ಆಚಾರ್ಯ ಕಾಲೇಜಿನ ಪ್ರಾಂಶುಪಾಲ ಡಾ.ಹೆಚ್.ಆರ್.ಆದರ್ಶ ಅಧ್ಯಕ್ಷತೆ ವಹಿಸಲಿದ್ದಾರೆ. ಅಪರ ಜಿಲ್ಲಾಧಿಕಾರಿ ವಿ.ಮಂಜು ನಾಥ್ ಅವರಿಗೆ ಕಾಯಕ ಯೋಗಿ ಮಾನಸಗಂಗಾ ದತ್ತಿ ಪ್ರಶಸ್ತಿ, ಪತ್ರಕರ್ತ ಜಿ.ಪ್ರಕಾಶ್ ಕಾಯಕ ಯೋಗಿ ಗಂಗಾ ಗುರುಶ್ರೀ ದತ್ತಿ ಪ್ರಶಸ್ತಿಗೆ ಆಯ್ಕೆ ಯಾಗಿದ್ದಾರೆ.

ಆಚಾರ್ಯ ವಾಣಿಜ್ಯ ಕಾಲೇಜಿನ ಅಧ್ಯಕ್ಷ ಕೆ.ಆರ್.ಹರೀಶ್ ಪ್ರಶಸ್ತಿ ಪ್ರದಾನ ಮಾಡುವರು. ಮೈಸೂರು ಜಿಲ್ಲಾ ಚುಸಾಪ ಅಧ್ಯಕ್ಷೆ ರತ್ನಾ ಹಾಲಪ್ಪಗೌಡ ಪುಸ್ತಕ ತಾಂಬೂಲ ನೀಡುವರು. ಕನ್ನಡ ಭುವನೇಶ್ವರಿಗೆ ಸಾಹಿತಿ ಮಳಲಿ ಹರೀಶ್ ಕುಮಾರ್ ಪುಷ್ಪಾರ್ಚನೆ ಮಾಡಲಿದ್ದಾರೆ. ಚುಟುಕು ಕವಿಗೋಷ್ಠಿ ಅಧ್ಯಕ್ಷತೆಯನ್ನು ಕೊಟ್ರೇಶ್ ಎಸ್. ಉಪ್ಪಾರ್ ವಹಿಸಲಿದ್ದಾರೆ.

# ಕಲಿಕಾ ಗುಣಮಟ್ಟ ವೃದ್ಧಿಗೆ ನಾಗರಿಕರ ಕೊಡುಗೆಯೂ ಮುಖ್ಯ

• ಪ್ರಜೋದಯ ವರದಿ

**ಹಾಸನ:** ಸರ್ಕಾರಿ ಶಾಲಾ ಮಕ್ಕಳ ಕಲಿಕೆಯಲ್ಲಿ ಗುಣಮಟ್ಟ ವೃದ್ಧಿಯಾಗಬೇಕೆಂದರೆ ಕೇವಲ ಶಿಕ್ಷಕರು ಶ್ರಮ ವಹಿಸಿದರೆ ಸಾಲುವುದಿಲ್ಲ, ನಾಗರಿಕರು ಶಾಲೆಗೆ ಬೇಕಾದ ಅವಶ್ಯ ಸವಲತ್ತು ಕಲ್ಪಿಸುವ ಮೂಲಕ ಭವಿಷ್ಯದ ಪ್ರಜೆಗಳ ನಿರ್ಮಾಣಕ್ಕೆ ಕೈ ಜೋಡಿಸಬೇಕೆಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರು ಸಲಹೆ ನೀಡಿದರು.

ನಗರದ ಪೆನ್ಷನ್ ಮೊಹಲ್ಲಾದಲ್ಲಿರುವ ಸರ್ಕಾರಿ ಉರ್ದು, ಇಂಗ್ಲೀಷ್ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ನಿವೃತ್ತ ಶಿಕ್ಷಕ ದಿ॥ಸೈಯದ್ ಅಬ್ದುಲ್ ರಶೀದ್ ಸ್ಮರಣಾರ್ಥ ಹಮ್ಮಿಕೊಂಡಿದ್ದ ಶಾಲೆಗೆ ಬ್ಯಾಂಡ್ ಸೆಟ್ ಕೊಡುಗೆ ಸಮಾರಂಭದಲ್ಲಿ ಮಾತನಾಡಿ, ಬದುಕಿನಲ್ಲಿ ಬದಲಾವಣೆ ತರುವ ಮಹತ್ತರ ಘಟ್ಟವೆಂದರೆ ಅದು ಶಿಕ್ಷಣವಾಗಿದೆ. ಸರ್ಕಾರಿ ಶಾಲೆಗಳ ಬಲ ವರ್ಧನೆಗೆ ಎಲ್ಲರೂ ಕೈ ಜೋಡಿಸಬೇಕು. ಸರ್ಕಾರಿ ಶಾಲೆ ಉಳಿಸುವುದು, ಮಕ್ಕಳಿಗೆ ಶಿಕ್ಷಣ ನೀಡುವುದು ಕೇವಲ ಶಿಕ್ಷಕರು ಹಾಗು ಸಿಬ್ಬಂದಿ ಕೆಲಸವಲ್ಲ. ಪೋಷಕರು ಈ ನಿಟ್ಟಿನಲ್ಲಿ ಜವಾಬ್ದಾರಿ ನಿಭಾಯಿಸಬೇಕಾಗುತ್ತದೆ. ಆರ್ಥಿಕ ಸ್ಥಿತಿವಂತರು ಸರ್ಕಾರಿ ಶಾಲೆಗಳಿಗೆ




ಕೈಲಾದ ಸಹಾಯ ಮಾಡಬೇಕೆಂದರು.

ವಿದ್ಯಾರ್ಥಿಗಳು ಸ್ವಾವಲಂಬಿ ಜೀವನಕ್ಕೆ ಆದ್ಯತೆ ನೀಡಬೇಕು. ಹೆಣ್ಣು ಮಕ್ಕಳು ಉತ್ತಮ ವ್ಯಾಸಂಗದ ಮೂಲಕ ಬದುಕು ಕಟ್ಟಿಕೊಳ್ಳಬೇಕು. ಕುಟುಂಬಸ್ಥರಿಗೆ ಹೊರೆಯಾಗದೆ ಬೆಳೆಯಬೇಕು. ಹದಿಹರೆಯದ ವಯಸ್ಸಿನಲ್ಲಿ ಪ್ರೀತಿ ಪ್ರೇಮದ ಆಕರ್ಷಣೆಗೆ ಒಳಗಾಗಿ ಓದಿನ ಕಡೆಗೆ ಗಮನ ಕಡಿಮೆ ಮಾಡುವ ಸಾಧ್ಯತೆ ಹೆಚ್ಚಿರುತ್ತದೆ. ಅದಕ್ಕೆ ಅವಕಾಶ ಮಾಡಿಕೊಡದೆ ಜೀವನದಲ್ಲಿ ಮಹತ್ವದ ಗುರಿ ಇಟ್ಟುಕೊಂಡು ಸಾಧನೆಯತ್ತ ಗಮನ ಹರಿಸಬೇಕು. ಬಾಲಕರು ಒಳಿತು ಕೆಡಕುಗಳ ಕುರಿತು ಅರಿವು ಹೊಂದಿರಬೇಕು. ದುಶ್ಚಟಗಳಿಗೆ ಯಾವ ಕಾರಣಕ್ಕೂ ದಾಸರಾಗ ಬಾರದೆಂದು ಸಲಹೆ ನೀಡಿದರು.

ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ಎಂ.ಬಲರಾಮ್, ಕ್ಷೇತ್ರ ಶಿಕ್ಷಣಾಧಿಕಾರಿ ಕೆ. ರಂಗನಾಥ್, ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಕಾಂತರಾಜು, ಜನಪ್ರಿಯ ಆಸ್ಪತ್ರೆ ಮುಖ್ಯಸ್ಥ ಡಾ॥ ಅಬ್ದುಲ್ ಬಶೀರ್, ಮಹಾನಗರ ಪಾಲಿಕೆ ಸದಸ್ಯ ರಫೀಕ್ ಅಹಮದ್, ಆಲೆ-ಅಮೀನ್ ಶಿಕ್ಷಣ ಸಂಸ್ಥೆಯ ಸಯ್ಯದ್ ತಾಜ್, ಪತ್ರಕರ್ತರಾದ ಆರ್.ಪಿ.ವೆಂಕಟೇಶ್ ಮೂರ್ತಿ, ರವಿ ನಾಕಲಗೂಡು, ಅತೀಖು ರೆಹಮಾನ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷೆ ಚೈತ್ರಾ ಮಂಜೇಗೌಡ, ಕಸಾಪ ಮಾಜಿ ಜಿಲ್ಲಾಧ್ಯಕ್ಷ ನಾಯಕರಹಳ್ಳಿ ಮಂಜೇಗೌಡ ಇತರರು ಇದ್ದರು.

## ಅರಸೀಕೆರೆಯಲ್ಲಿ ವಿಶ್ವ ಪತ್ರಿಕಾ ವಿತರಕರ ದಿನಾಚರಣೆ | ಟಿ ಶರ್ಟ್ ವಿತರಣೆ


# ಪತ್ರಿಕಾ ವಿತರಕರ ಸೇವೆ ಶ್ಲಾಘನೀಯ: ಕೋಡಿಶ್ರೀ

• ಪ್ರಜೋದಯ ವರದಿ

**ಅರಸೀಕೆರೆ:** ಪ್ರತಿ ದಿನದ ಜಗತ್ತಿನ ಆಗು-ಹೋಗುಗಳನ್ನು ಮನೆ ಮನೆಗೆ ತಲುಪಿಸುವ ಪತ್ರಿಕಾ ವಿತರಕರ ಸೇವೆ ಶ್ಲಾಘನೀಯವೆಂದು ಹಾರನಹಳ್ಳಿ ಕೋಡಿಮಠದ ಡಾ.ಶ್ರೀ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಹೇಳಿದರು.

ವಿಶ್ವ ಪತ್ರಿಕಾ ವಿತರಕರ ದಿನಾಚರಣೆ ಅಂಗವಾಗಿ ಶ್ರೀ ಮಠಕ್ಕೆ ಗುರುವಾರ ಭೇಟಿ ನೀಡಿದ್ದ ಪತ್ರಿಕಾ ವಿತರಕರಿಗೆ ಟಿ ಶರ್ಟ್ ವಿತರಿಸಿ ಮಾತನಾಡಿ, ಪತ್ರಕರ್ತ ಸುದ್ದಿಯನ್ನು ಹೆಕ್ಕಿ ತಂದರೆ, ಪತ್ರಿಕಾ ವಿತರಕರು ಪತ್ರಿಕೆಯನ್ನು ಮನೆ ಬಾಗಿಲಿಗೆ ತಲುಪಿಸಿ ಜ್ಞಾನ ಉಣಬಡಿಸುತ್ತಾರೆ. ಸಮಾಜ ಜಾಗೃತಿಗೊಳಿಸುವಲ್ಲಿ ಇಬ್ಬರ ಜವಾಬ್ದಾರಿ ಮಹತ್ವದ್ದಾಗಿದೆಯೆಂದು ಹೇಳಿದರು.

ಯಾವ ಕೆಲಸದಲ್ಲೂ ಮೇಲು ಕೀಳು ಎಂಬುದಿಲ್ಲ, ನಮ್ಮ ಬದುಕು ಹಾಗು ಸಮಾಜಕ್ಕೆ ಒಳಿತಾಗುವ ಯಾವ ಕೆಲಸ ಮಾಡಿದರೂ ಅದನ್ನು ಜನರು ಮಾತ್ರವಲ್ಲ ಜನಾರ್ಧನ ಮೆಚ್ಚುತ್ತಾನೆಂದರು.



ಪತ್ರಿಕಾ ವಿತರಕರು ಮುಂಜಾನೆ ಮನೆ ಮನೆಗೆ ತೆರಳಿ ಸುದ್ದಿ ಮುಟ್ಟಿಸುವ ಪಕ್ಷಿಗಳಿದ್ದಂತೆ, ಇಂಥಹ ಪಕ್ಷಿಗಳು ಭವಿಷ್ಯದಲ್ಲಿ ತಮಗಿಷ್ಟವಾದ ಎತ್ತರದ ಮಟ್ಟದಲ್ಲಿ ಹಾರಾಡಲಿ, ಅದಕ್ಕೆ ಬೇಕಾದ ವ್ಯವಸ್ಥೆ ಕಲ್ಪಿಸಿಕೊಡುವ ಜವಾಬ್ದಾರಿ ಸರ್ಕಾರ ಹಾಗು ಸಂಘ ಸಂಸ್ಥೆಗಳದ್ದಾಗಿದೆಯೆಂದರು.

**ಕೇಕ್ ಕತ್ತರಿಸಿ ಆಚರಣೆ**

ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘ ಹಾಗು ಪತ್ರಿಕಾ ವಿತರಕರ ಸಂಘದಿಂದ ನಗರದ ಪಿ.ಪಿ. ವೃತ್ತದಲ್ಲಿ ವಿಶ್ವ ಪತ್ರಿಕಾ ವಿತರಕರ ದಿನಾಚರಣೆಯನ್ನು ಕೇಕ್ ಕತ್ತರಿಸುವ ಮೂಲಕ ಆಚರಿಸಲಾಯಿತು.

ಉದ್ಯಮಿ ರಾಘು ಅವರು ಮಾತನಾಡಿ, ಮಳೆ, ಚಳಿ, ಗಾಳಿ ಎನ್ನದೆ ಸುರ್ಯೋದಯಕ್ಕೂ ಮೊದಲೇ ಮುಟ್ಟಿಸುವ ಮೂಲಕ ಸಮಾಜದ ಬೆಳವಣಿಗೆ ಕಾರಣೀಕರ್ತರಾಗಿರುವ ಪತ್ರಿಕಾ ವಿತರಕರ ಸೇವೆಗೆ ಬೆಲೆ ಕಟ್ಟಲು ಸಾಧ್ಯವಿಲ್ಲವೆಂದರು.

ಮಾಜಿ ರಾಷ್ಟ್ರಪತಿ ದಿ॥ಅಬ್ದುಲ್ ಕಲಾಂ ಸಹ ಮುಂಜಾನೆ ಪತ್ರಿಕೆ ಹಂಚುತ್ತಿದ್ದರು ಎಂಬುದನ್ನು ವಿತರಕರು ಅರಿಯಬೇಕು. ಅವರಂತೆ ತಾವೂ ಸಹ ಉತ್ತಮ ವಿದ್ಯಾಭ್ಯಾಸ ಮಾಡಿ ಸಮಾಜದಲ್ಲಿ ಉನ್ನತ ಸ್ಥಾನಮಾನ ಪಡೆಯಿರಿ ಎಂದರು.

ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ಬಿ. ಪರಮೇಶ್, ತಾಲ್ಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ಮಂಜುನಾಥ್ ಮಾತನಾಡಿದರು. ಉಪಾಧ್ಯಕ್ಷ ಸಿದ್ದೇಶ್, ಮಾಜಿ ಅಧ್ಯಕ್ಷರಾದ ರಾಮಚಂದ್ರು, ಟಿ.ಆನಂದ್, ಕಣಕಟ್ಟೆ ಕುಮಾರ್, ಕಾರ್ಯದರ್ಶಿಗಳಾದ ರಂಗನಾಥ್, ಮೋಹನ್, ಮಾಜಿ ಕಾರ್ಯದರ್ಶಿಗಳಾದ ನವೀನ್, ಶೇಖರ್ ಸಂಕೋಡನಹಳ್ಳಿ, ಪತ್ರಕರ್ತರಾದ ಟಿ.ಎ.ಸ್ವಾಮಿ, ವಿಜಯ ಕುಮಾರ್, ನಾಗರಾಜಶೆಟ್ಟಿ, ರಮೇಶ್, ಬಸವರಾಜು, ಜೀವನ್ ಕುಮಾರ್, ಸುರೇಶ್, ಹರಿಪ್ರಸಾದ್, ವಿತರಕರ ಸಂಘದ ತಾಲ್ಲೂಕು ಅಧ್ಯಕ್ಷ ಕೃಷ್ಣಮೂರ್ತಿ, ಕಾರ್ಯದರ್ಶಿ ನಾಗೇಂದ್ರ ಇದ್ದರು.

# ಅತಿಥಿ ಉಪನ್ಯಾಸಕರ ನೇಮಕ ವಿಳಂಬ : ನಡೆಯದ ತರಗತಿ

» ಮೊದಲನೇ ಪುಟದಿಂದ

ಸಹ ನೀಡಿ ಕಾಲಾವಧಿ ನಿಗದಿ ಮಾಡಿತ್ತು. ಅದಾದ ಬಳಿಕ ರಾಜ್ಯ ಹೈಕೋರ್ಟ್ ಸಹ ಯುಜಿಸಿ ನಿಯಮಾವಳಿ ಪ್ರಕಾರ ಎನ್ಇಟಿ

ಹಾಗು ಎಲ್‌ಎಲ್‌ಇಟಿ ಪಾಸಾಗಿರುವ ಮತ್ತು ಪಿಹೆಚ್‌ಡಿ ಮುಗಿಸಿರುವ ಅರ್ಹತೆ ಹೊಂದಿರುವವರನ್ನಷ್ಟೇ ಅತಿಥಿ ಉಪನ್ಯಾಸಕರನ್ನಾಗಿ ನೇಮಕ ಮಾಡಿಕೊಳ್ಳುವಂತೆ 2 ವರ್ಷಗಳ ಹಿಂದೆ ಹೈಕೋರ್ಟ್ ಸರ್ಕಾರಕ್ಕೆ ಕಟ್ಟುನಿಟ್ಟಿನ ಸೂಚನೆ ನೀಡಿತ್ತು. ಈ ಎಲ್ಲಾ ಗೊಂದಲಗಳಿಂದ ವಿದ್ಯಾರ್ಥಿಗಳ ಕಲಿಕೆಗೆ ತೊಂದರೆಯಾಗಿದೆ ಎಂದು ಆರೋಪಿಸಿದ್ದಾರೆ.

ಹೈಕೋರ್ಟ್ ನಿರ್ದೇಶನದ ಪ್ರಕಾರವೇ ರಾಜ್ಯ ಸರ್ಕಾರ ಜನವರಿಯಲ್ಲೇ 1 ಸಾವಿರ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿದೆ. ಅವರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಉಳಿದಂತೆ ಅಗತ್ಯವಿರುವವರನ್ನು ನೇಮಕ ಮಾಡಿಕೊಟ್ಟಲು ಗೊಂದಲ ಅಡ್ಡಿಯಾಗಿದೆ. ಕೂಡಲೇ ಎದುರಾಗಿರುವ ಗೊಂದಲವನ್ನು ಸರಿಪಡಿಸಿ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಬೇಕೆಂದು ಒತ್ತಾಯಿಸಿದ್ದಾರೆ.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019